ಸಂಪುಟ : 10 ಸಂಚಿಕೆ: 139 ಪುಟ : 4+2 ಬೆಲೆ: 3.00 ಶನಿವಾರ ಜುಲೈ 05 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 139 Pages : 4+2 Price : 3.00 Saturday July 05 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಪ್ರತಿಬಂಧಕಾಜ್ಞೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ 2025 ರ ಎಸ್.ಎಸ್.ಎಲ್.ಸಿ. ಪರೀಕ್ಷೆಗಳು–3 ಪರೀಕ್ಷೆಗಳನ್ನು ಜುಲೈ 5 ರಿಂದ 12 ರವರೆಗೆ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1.45 ಗಂಟೆಯವರೆಗೆ ನಡೆಸಲಿದೆ. ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯ 12 ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವನ್ನಾಗಿ ಘೋಷಿಸಿದೆ. ಜುಲೈ 5 ರಿಂದ 12 ರವರೆಗೆ ಬೆಳಿಗ್ಗೆ 9.30 ಗಂಟೆಯಿಂದ ಮಧ್ಯಾಹ್ನ 2.30 ಗಂಟೆಯವರೆಗೆ ಪರೀಕ್ಷಾ ಕೇಂದ್ರಗಳ ಸುತ್ತಲೂ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ. ಪರೀಕ್ಷಾರ್ಥಿಗಳ ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ.

ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝರಾಕ್ಸ್ ಅಂಗಡಿ, ಬುಕ್ ಸ್ಟಾಲ್ , ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ. ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಮತ್ತು ಹೊರಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ, ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಚುನಾಯಿತ ಯುವ ಕಾಂಗ್ರೆಸ್ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮದ ಪೂರ್ವಭಾವಿ ಸಭೆ

## ಹಿರಿಯರ ಮಾರ್ಗದರ್ಶನದಲ್ಲಿ ಪಕ್ಷದ ಬಲ ಹೆಚ್ಚಿಸಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಈ ದೇಶಕ್ಕೆ ಯುವಶಕ್ತಿಯ ಕೊಡುಗೆ ಅಪಾರವಾಗಿದೆ. ಅದರಂತೆ ಕಾಂಗ್ರೆಸ್ ಪಕ್ಷದಲ್ಲಿ ಯುವಕರಿಗೆ ಆದ್ಯತೆ ಇಲ್ಲ ಎನ್ನುವ ವಿರೋಧ ಪಕ್ಷಗಳ ಟೀಕೆಗೆ ಕಾಂಗ್ರೆಸ್‌ನಲ್ಲಿ ಯುವಕರಿಗೆ ಸದಾ ಹೆಚ್ಚು ಆದ್ಯತೆ ನೀಡುವ ಮೂಲಕ ಉತ್ತರ ಕೊಡುತ್ತಿದೆ. ಯುವ ಶಕ್ತಿ ಇತ್ತೀಚೆಗೆ ಕಾಂಗ್ರೆಸ್ ಕಡೆಗೆ ಹೆಚ್ಚು ವಾಲುತ್ತಿದ್ದಾರೆ ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ನಿಯೋಜಿತ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಪಟ್ಟಣದ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಅವರ ನಿವಾಸದಲ್ಲಿ ಜಿಲ್ಲಾ ಯುವ ಕಾಂಗ್ರೆಸ್ ವತಿಯಿಂದ ಜುಲೈ 12ರಂದು ನಡೆಯುವ ಚುನಾಯಿತ ಯುವ ಕಾಂಗ್ರೆಸ್ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮದ ಕುರಿತು ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಯುವ ಶಕ್ತಿಯನ್ನು ಒಗ್ಗೂಡಿಸುವ ನಿಟ್ಟಿನಲ್ಲಿ ಗದುಗಿನಲ್ಲಿ ನಡೆಯುವ ಪದಗ್ರಹಣ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಯುವ ಸಮೂಹ ಭಾಗವಹಿಸಬೇಕು. ಜಿಲ್ಲೆಯಲ್ಲಿ ಪಕ್ಷದ ಹಿರಿಯರ ಮಾರ್ಗದರ್ಶನಲ್ಲಿ ಯುವಕರು ಪಕ್ಷದ ಬಲ ಹೆಚ್ಚಿಸಬೇಕು. ಜು.12ರಂದು ಗದುಗಿನ ಸ್ವಾಮಿ ವಿವೇಕಾನಂದ ಸಭಾ ಭವನದಲ್ಲಿ ನಡೆಯುವ 'ಯುವ ಧ್ವನಿ' ಕಾರ್ಯಕ್ರಮಕ್ಕೆ ಸಹಸ್ರ ಸಂಖ್ಯೆಯಲ್ಲಿ ಕಾರ್ಯಕರ್ತರು ಬಂದು ಯಶಸ್ವಿಗೊಳಿಸಬೇಕು. ಕಾರ್ಯಕ್ರಮಕ್ಕೆ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ್, ಸಚಿವ ಪ್ರಿಯಾಂಕ ಖರ್ಗೆ, ಜಿಲ್ಲಾಧ್ಯಕ್ಷ ಜಿ.ಎಸ್. ಪಾಟೀಲ್, ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷರು ಪದಾಧಿಕಾರಿಗಳು, ಪಕ್ಷದ ಶಾಸಕರು, ಮಾಜಿ ಶಾಸಕರು, ಕಾರ್ಯಕರ್ತರು ಆಗಮಿಸಲಿದ್ದಾರೆ ಎಂದು ಹೇಳಿದರು.

ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಮಾತನಾಡಿ, ಪಕ್ಷಕ್ಕೆ ಯುವ ಶಕ್ತಿ ಆನೆಬಲ ಇದ್ದಂತೆ. ಪಕ್ಷವನ್ನು ಹಿರಿಯರು ಕಟ್ಟಿ ಬೆಳೆಸಿದ್ದರೆ, ಅದನ್ನು ಯಶಸ್ವಿಯಾಗಿ ನಿಭಾಯಿಸಿಕೊಂಡು ಹೋಗುವ ಶಕ್ತಿ ಯುವಕರಿಗಿದೆ. ಜಿಲ್ಲೆಯಲ್ಲಿ ನಡೆಯುತ್ತಿರುವ ಯುವ ಕಾಂಗ್ರೆಸ್ ಸಮಾವೇಶ ರಾಜ್ಯಕ್ಕೆ ಒಂದು ಸಂದೇಶವನ್ನು ನೀಡಲಿದೆ. ಅದಕ್ಕಾಗಿ ಹೆಚ್ಚಿನ ಸಂಖ್ಯೆಯಲ್ಲಿ ಪಕ್ಷದ ಕಾರ್ಯಕರ್ತರು ಪಾಲ್ಗೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ರಾಜ್ಯ ಪ್ರ. ಕಾರ್ಯದರ್ಶಿ ಅಕ್ಷಯ ಪಾಟೀಲ, ಉದಯಗೌಡ ವೀರನಗೌಡ, ಹಜರೇಸಾಬ ನದಾಫ್, ಲೋಕೇಶ ದೊಡ್ಡಮನಿ, ತಾಲೂಕಾ ಅಧ್ಯಕ್ಷ ರಾಹುಲ್ ಹೊಳಲಾಪುರ, ನಗರ ಅಧ್ಯಕ್ಷ ಅಮರೇಶ ತೆಂಬದಮನಿ, ಜಯಮ್ಮ ಕಳ್ಳಿ, ರಾಜರತ್ನ ಹುಲಗೂರ, ಕಿರಣ ನವಲೆ, ಮಹಾಂತೇಶ ಗುಡಿಸಲಮನಿ, ಪ್ರಕಾಶ ಕೊಂಚಿಗೇರಿಮಠ, ವಾಸಿಂ ಮುಚ್ಚಾಲೆ, ನೀಲಪ್ಪ ಶೇರಸೂರಿ, ದಾದಾಪೀರ ಟಕ್ಕೇದ, ಯಲ್ಲಪ್ಪ ಹಂಜಗಿ, ರಾಜು ಓಲೇಕಾರ, ಶಿದ್ದು ದುರಗಣ್ಣವರ, ಸರ್ಫರಾಜ ಸೂರಣಗಿ, ಮಹಾದೇವ ಹಾದಿಮನಿ, ಬಸವರಾಜ ಬೆಟಗೇರಿ, ರಾಜು ಓಲೇಕಾರ, ರಾಜು ಬೆಂಚಳ್ಳಿ, ಬಾಬು ಅಳವಂಡಿ ಸೇರಿದಂತೆ ಕಾಂಗ್ರೆಸ್ ಪಕ್ಷದ ನೂರಾರು ಕಾರ್ಯಕರ್ತರು ಇದ್ದರು.

### MLC ರವಿಕುಮಾರ್ ವಿರುದ್ಧ ಹೆಚ್ ಕೆ ಪಾಟೀಲ್ ಕಿಡಿ!

## ನಿಮಗೆ ಆತ್ಮಸಾಕ್ಷಿ ಇದ್ದರೆ ಸಾರ್ವಜನಿಕವಾಗಿ ಕ್ಷಮೆ ಕೇಳಿ



■ವಿಜಯಸಾಕ್ಷಿ ಸುದ್ದಿ, ಹಾವೇರಿ

ಬಿಜೆಪಿ ಮುಖಂಡ ರವಿಕುಮಾರ್‌ಗೆ ಆತ್ಮಸಾಕ್ಷಿ ಇದ್ದರೆ ಸಾರ್ವಜನಿಕವಾಗಿ ಕ್ಷಮೆ ಕೇಳಲಿ ಎಂದು ಸಚಿವ ಹೆಚ್ ಕೆ ಪಾಟೀಲ್ ಹೇಳಿದ್ದಾರೆ.

ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ವಿರುದ್ಧ ಒಐಅ ರವಿಕುಮಾರ್ ನೀಡಿದ ಅವಹೇಳನಕಾರಿ ಹೇಳಿಕೆಗೆ ಜಿಲ್ಲೆಯ ರಾಣೆಬೆನ್ನೂರಿನಲ್ಲಿ ಪ್ರತಿಕ್ರಿಯಿಸಿದ ಸಚಿವ ಹೆಚ್ ಕೆ ಪಾಟೀಲ್, ಬಿಜೆಪಿ ಎಂ.ಎಲ್ ಸಿ ರವಿಕುಮಾರ್ ವಿರುದ್ಧ ಕಿಡಿಕಾರಿದರು.

ಇದು ಅತ್ಯಂತ ದುರ್ದೈವ. ಶಾಸನ ಸಭೆ ಸದಸ್ಯರು, ಬಿಜೆಪಿ ನಾಯಕರು ಹಿರಿಯ ಅಧಿಕಾರಿಯೊಬ್ಬರ ಮೇಲೆ ಲಘುವಾಗಿ ಮಾತಾಡಿರೋದು ನೀಚ ಕೆಲಸ. ಮಹಿಳೆಯರಿಗೆ ಸಣ್ಣ ಅಗೌರವ ಆದರೂ ನಮ್ಮ ಸಮಾಜ ಸಹಿಸಲ್ಲ. ಈ ಲಘುವಾದ, ಅವಮಾನಕರ ಮಾತನ್ನು ನಾವು ತೀವ್ರವಾಗಿ ಖಂಡನೆ ಮಾಡಲೇಬೇಕು. ರವಿ ಕುಮಾರ್ ಅವರಿಗೆ ಆತ್ಮಸಾಕ್ಷಿ ಇದ್ದರೆ ಕ್ಷಮೆ ಕೇಳಲಿ. ಅದೂ ಸಾರ್ವಜನಿಕವಾಗಿ ಕ್ಷಮೆ ಕೇಳಬೇಕು ಎಂದು ಅಪೇಕ್ಷೆ ಪಡುತ್ತೇನೆ. ಇಲ್ಲದಿದ್ದರೆ ಜನರಿಗೆ ಅವಮಾನ ಮಾಡಿದ ಹಾಗೆ ಆಗುತ್ತೆ ಎಂದರು.

RSS ಬ್ಯಾನ್ ವಿಚಾರಕ್ಕೆ ಹೆಚ್ ಕೆ ಪಾಟೀಲ್ ಹೇಳಿದ್ದೇನು?

ಆರ್ ಎಸ್ ಎಸ್ ಬ್ಯಾನ್ ಮಾಡಬೇಕು ಎಂಬ ಸಚಿವ ಪ್ರಿಯಾಂಕ ಖರ್ಗೆ ಹೇಳಿಕೆ ವಿಚಾರವಾಗಿ ಮಾತನಾಡಿ, ಅದನ್ನ ಅವರ ಹತ್ರ ಕೇಳಬೇಕು. ಆರ್ ಎಸ್ ಎಸ್ ಸಂಘಟನೆ ಬಿಜೆಪಿ ಉಪಯೋಗಿಸಿಕೊಂಡು ಸಮಾಜ ವಿಭಜನೆ ಮಾಡುತ್ತಿದೆ ಎಂದು ಬಿಜೆಪಿ ನಾಯಕರೇ ಹೇಳುತ್ತಾರೆ. ಅದಕ್ಕಾಗಿ ಆ ಹೇಳಿಕೆ ಕೊಟ್ಟಿರಬಹುದು ಎಂದರು.

ಸಿಎಂ ಬದಲಾವಣೆ ವಿಚಾರವಾಗಿ ಮಾತಾಡಲ್ಲ

ಸಿಎಂ ಬದಲಾವಣೆ ವಿಚಾರವಾಗಿ ನನ್ನ ಪ್ರಾರ್ಥನೆ ಫಲಿಸಬಹುದು ಎಂಬ ಡಿಕೆಶಿ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ನಾನು ಇಷ್ಟೇ ಹೇಳುತ್ತೇನೆ ನಮ್ಮ ಮುಖ್ಯಸ್ಥರು ಮಲ್ಲಿಕಾರ್ಜುನ ಖರ್ಗೆಯವರು. ಸಿಎಂ ಬದಲಾವಣೆ ವಿಚಾರ, ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ವಿಚಾರವಾಗಿ ಯಾರೂ ಮಾತಾಡತಕ್ಕದಲ್ಲ ಎಂದು ಖರ್ಗೆಯವರು ಹೇಳಿದ್ದಾರೆ. ಅವರ ಮಾತು ನಮಗೆ ಆದೇಶ ಇದ್ದಂತೆ ಎಂದರು.


▶▶3ನೇ ಪುಟಕ್ಕೆ

### ದಿವಾಳಿ ಆಗಿರೋದು ನೀವು

ಕಾಂಗ್ರೆಸ್ ಸರ್ಕಾರಕ್ಕೆ ಸರ್ಕಾರಿ ನೌಕರರಿಗೂ ಸಂಬಳ ಕೊಡಲಾಗುತ್ತಿಲ್ಲ ಎಂಬ ಬಿ.ವೈ ವಿಜಯೇಂದ್ರ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಸಚಿವ ಎಚ್ ಕೆ ಪಾಟೀಲ, ಪಗಾರ ನಿಂತಿದ್ರೆ ಸುಮ್ಮನಿರ್ತಿದ್ರಾ? ಮಲೆ ಮಹದೇಶ್ವರ ಬೆಟ್ಟದಲ್ಲಿ ಸಂಪುಟ ಸಭೆ ಮಾಡಿದೆವು. ಆ ಪ್ರದೇಶಕ್ಕೆ ಅಂತಾನೇ 34 ಕೋಟಿ ಮಂಜೂರು ಮಾಡಿದ್ದೆವು. ಇದು ಬಿಜೆಪಿಯವರಿಗೆ ಕಾಣಲ್ಲವಾ? ನಮ್ಮ ಸರ್ಕಾರದಲ್ಲಿ ಹಣ ಇಲ್ಲ ಎನ್ನುತ್ತೀರಿ. ನೀವು 5000 ಕೋಟಿ ರೂ ಭದ್ರಾ ಕಾಲುವೆ ಅಭಿವೃದ್ಧಿಗೆ ಕೊಡುತ್ತೇವೆಂದು ಬಜೆಟ್ ನಲ್ಲಿ ಹೇಳಿದ್ದೀರಿ, ಆದರೆ ಕೊಡಿಸಿದ್ರಾ? ಕಾನೂನು ಪ್ರಕಾರ ಕೊಟ್ಟರಾ? ದಿವಾಳಿ ನೀವು ಆಗಿದ್ದೀರಿ ಎಂದು ವಾಗ್ದಾಳಿ ನಡೆಸಿದರು.

## ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ಅವರು ಜುಲೈ 5 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು ಪ್ರವಾಸದ ವಿವರ ಇಂತಿದೆ.

ಜುಲೈ 5 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಹಾತಲಗೇರಿ ನಾಕಾ, ಪತ್ತಾರ ಕಾಂಪ್ಲೆಕ್ಸ್ ನಲ್ಲಿ ನೂತನ ನಂದಿನಿ ಹಾಲು ಮತ್ತು ಹಾಲಿನ ಉತ್ಪನ್ನಗಳ ಮಾರಾಟ ಮಳಿಗೆ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಬೆಳಿಗ್ಗೆ 11 ಗಂಟೆಗೆ ನಗರದ ಸೋಮೇಶ್ವರ ರಸ್ತೆಯಲ್ಲಿನ ಗದಗಿನ ರಾಮೇಶ್ವರ ದೇವಸ್ಥಾನಕ್ಕೆ ಭೇಟಿ ನೀಡುವರು.

ಬೆಳಿಗ್ಗೆ 11.30 ಗಂಟೆಗೆ ಮಲ್ಲಸಮುದ್ರ ಗ್ರಾಮದ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಮಹಾವಿದ್ಯಾಲಯ 2024–25 ನೇ ಸಾಲಿನಲ್ಲಿ ದ್ವಿತೀಯ ಪಿ.ಯು.ಸಿಯಲ್ಲಿ ಶೇ 85 ಕ್ಕಿಂತ ಹೆಚ್ಚಿನ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ನಗದು ಬಹುಮಾನ ವಿತರಣಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಮಧ್ಯಾಹ್ನ 12 ಗಂಟೆಗೆ ಮಲ್ಲಸಮುದ್ರ ಗ್ರಾಮದ ಎಸ್.ಎಚ್.–6 ರಾಜ್ಯ ಹೆದ್ದಾರಿಯಿಂದ ಮಲ್ಲಸಮುದ್ರ ಗ್ರಾಮದಡಿ ಡಿ.ಎ.ಆರ್.( ಪೊಲೀಸ್ ಇಲಾಖೆ) ಕ್ಯಾಂಪಸ್ ವರೆಗಿನ ರಸ್ತೆ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 12.30 ಗಂಟೆಗೆ ಮಲ್ಲಸಮುದ್ರ ಗ್ರಾಮದ ಕೆರೆ ಅಭಿವೃದ್ಧಿ ಕಾಮಗಾರಿಯ ಭೂಮಿ ಪೂಜೆ ಸಮಾರಂಭದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 1 ಗಂಟೆಗೆ ಮಲ್ಲಸಮುದ್ರದ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆಯ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಸಂಜೆ 4 ಗಂಟೆಗೆ ನಗರದ ಶ್ರೀ ಭೀಮಸೇನ ಜೋಶಿ ರಂಗಮಂದಿರದಲ್ಲಿ ಗಾಂಧೀಜಿ ಕನಸಿನ ಗ್ರಾಮ ಸ್ವರಾಜ್ಯ ಪರಿಕಲ್ಪನೆಯ ಅನುಷ್ಠಾನದ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಸಂಜೆ 7 ಗಂಟೆಗೆ ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಸೇವಾ ತಂಡದ ಸಭೆಯಲ್ಲಿ ಪಾಲ್ಗೊಂಡು ವಾಸ್ತವ್ಯ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ಡಾ. ಬಸವರಾಜ ಬಳ್ಳಾರಿ ಅವರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಡಾ. ಬಸವರಾಜ ಬಳ್ಳಾರಿ ಅವರನ್ನು ಜಿಲ್ಲಾಡಳಿತ ಭವನದ ಲಕ್ಕುಂಡಿ ಪಾರಂಪರಿಕ ಅಭಿವೃದ್ಧಿ ಪಾಧಿಕಾರದ ಕಚೇರಿಯಲ್ಲಿ ಶುಕ್ರವಾರ ಸನ್ಮಾಸಿಲಾಯಿತು.

ಈ ಸಂದರ್ಭದಲ್ಲಿ ಲಕ್ಕುಂಡಿ ಪ್ರಾಧಿಕಾರ ಆಯುಕ್ತ ಡಾ. ಶರಣು ಗೊಗೇರಿ, ರಾಜ್ಯ ಸರಕಾರಿ ನೌಕರರ ಸಂಘದ ನಿಕಟಪೂರ್ವ ಅಧ್ಯಕ್ಷ ರವಿ ಗುಂಜೀಕರ, ಜಿಲ್ಲಾ ನೌಕರ ಸಂಘದ ಖಜಾಂಚಿ ಮಹಾಂತೇಶ ನಿಟ್ಟಾಲಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ, ವಯಸ್ಕರ ಶಿಕ್ಷಣಾಧಿಕಾರಿ ಶಿವಕುಮಾರ ಕುರಿಯವರ, ಡಯಟ್ ಉಪನ್ಯಾಸಕ ಎಚ್.ಬಿ. ರಡ್ಡೇರ, ಡಿಡಿಪಿಐ ಕಛೇರಿ ಪರಿವೀಕ್ಷಕ ಶ್ರೀಧರ ಬಡಿಗೇರ, ಕರೀಂ ಸುಣಗಾರ ಹಾಜರಿದ್ದರು.

## ಡಿಪ್ಲೋಮಾ ಪ್ರವೇಶದ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪಾಲಿಟೆಕ್ನಿಕ್, ನರಸಾಪೂರ, ಬೆಟಗೇರಿ, ಗದಗ ಸಂಸ್ಥೆಯಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ತತ್ಸಮಾನ ಪರೀಕ್ಷೆಯಲ್ಲಿ ಪಾಸಾದ ಅರ್ಹ ಅಭ್ಯರ್ಥಿಗಳಿಂದ ಖಾಲಿ ಇರುವ ಮೊದಲ ವರ್ಷದ ಡಿಪ್ಲೋಮಾ ಸೀಟುಗಳಿಗೆ ಹಾಗೂ 2ವರ್ಷಗಳ ಐ.ಟಿ.ಐ./ ದ್ವಿತಿಯ ಪಿ.ಯು.ಸಿ. (ವಿಜ್ಞಾನ) ಪಾಸಾದ ವಿದ್ಯಾರ್ಥಿಗಳಿಗೆ 3ನೇ ಸೆಮಿಸ್ಟರ್ ಲ್ಯಾಟರಲ್ ಎಂಟ್ರಿ ಖಾಲಿ ಉಳಿದಿರುವ ಸೀಟುಗಳಿಗೆ ಪ್ರಾಂಶುಪಾಲರ ಹಂತದಲ್ಲಿ "ಆಫ್–ಲೈನ್" ಮೂಲಕ ಡಿಪ್ಲೋಮಾ ಪ್ರವೇಶ ಪಡೆಯಲು ಜುಲೈ 15 ರವರಗೆ ಅಂತಿಮ ದಿನಾಂಕವನ್ನು ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಯನ್ನು ಕಾಲೇಜಿನ ಕಚೇರಿ ಅವಧಿಯಲ್ಲಿ ಪಡೆಯಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಪ್ರಮಾಣಪತ್ರ, ಕಿಟ್, ರಾಕೇಶ ಸಿದ್ದರಾಮಯ್ಯ ಶಿಷ್ಯವೇತನ ವಿತರಣಾ ಸಮಾರಂಭ ನಾಳೆ

## ಕುರುಬ ಸಮಾಜದ ವಿದ್ಯಾರ್ಥಿಗಳಿಗೆ ನಗದು ಪುರಸ್ಕಾರ

■ವಿಜಯಸಾಕ್ಷಿ ಸುದ್ದಿ, ಗದಗ



ಕಾಳಿದಾಸ, ಸಂಗೊಳ್ಳಿ ರಾಯಣ್ಣ ವಿದ್ಯಾರ್ಥಿ ನಿಲಯದ ಹಳೆಯ ವಿದ್ಯಾರ್ಥಿಗಳ ಸಂಘ ಬೆಂಗಳೂರು, ಕರ್ನಾಟಕ ಪ್ರದೇಶ ಕುರುಬರ ಸಂಘ ಗದಗ ಜಿಲ್ಲಾ ಶಾಖೆ, ರಾಕೇಶ ಸಿದ್ದರಾಮಯ್ಯ ಟ್ರಸ್ಟ್ ಗದಗ, ಕಾಳಿದಾಸ ಶಿಕ್ಷಣ ಸಮಿತಿ ಗದಗ ಇವುಗಳ ಸಂಯುಕ್ತ ಆಶ್ರಯದಲ್ಲಿ 'ಸ್ವತಂತ್ರ ಅಮೃತ ಮಹೋತ್ಸವ ಮುನ್ನಡೆ' ಯೋಜನೆಯಡಿ ಅಲ್ಪಾವಧಿ ಕೌಶಲ್ಯಾಧಾರಿತ ಕೋರ್ಸ್‌ಗಳ ತರಬೇತಿ ಪಡೆದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ಮತ್ತು ಕಿಟ್ ವಿತರಣೆ, ರಾಕೇಶ ಸಿದ್ದರಾಮಯ್ಯ ಶಿಷ್ಯವೇತನ ವಿತರಣಾ ಸಮಾರಂಭವು ಜುಲೈ 6ರಂದು ಮದ್ಯಾಹ್ನ 1 ಗಂಟೆಗೆ ನಗರದ ಶ್ರೀ ಕನಕ ಭವನದಲ್ಲಿ ಜರುಗಲಿದೆ ಎಂದು ಕರ್ನಾಟಕ ಪ್ರದೇಶ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕ್ಕೀರಪ್ಪ ಹೆಬಸೂರ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಕರೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ಈ ಸಮಾರಂಭದಲ್ಲಿ 2023–24, 2024–25ನೇ ಸಾಲಿನ ದ್ವಿತೀಯ ಪಿ.ಯು.ಸಿ ವಿಜ್ಞಾನ ವಿಭಾಗದಲ್ಲಿ ಶೇ. 90ಕ್ಕಿಂತ ಹೆಚ್ಚು ಅಂಕ ಪಡೆದ ಒಟ್ಟು 30 ವಿದ್ಯಾರ್ಥಿಗಳಿಗೆ ಟ್ಯಾಬ್ ವಿತರಣೆ, 2023–24, 2024–25ನೇ ಸಾಲಿನ ದ್ವಿತೀಯ ಪಿ.ಯು.ಸಿಯಲ್ಲಿ ಶೇ.75ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಗೆ ಶಿಷ್ಯವೇತನ ವಿತರಣೆ, 2023–24, 2024–25ನೇ ಸಾಲಿನ ಎಸ್‌ಎಸ್‌ಎಲ್‌ಸಿಯಲ್ಲಿ ಶೇ. 75ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಶಿಷ್ಯವೇತನ ವಿತರಣೆ ಸೇರಿದಂತೆ ಒಟ್ಟು ಸಮಾಜದ 300ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ನಗದು ಪುರಸ್ಕಾರ ನೀಡಿ ಗೌರವಿಸಲಾಗುವುದು ಎಂದು ಹೇಳಿದರು. ಈ ಕಾರ್ಯಕ್ರಮವನ್ನು ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ ಉದ್ಘಾಟಿಸುವರು. ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ರೋಣ ಶಾಸಕ ಜಿ.ಎಸ್. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ ಸಂಕನೂರ, ಮಾಜಿ ಸಚಿವ ಬಿ.ಆರ್. ಯಾವಗಲ್, ಮಾಜಿ ಶಾಸಕರುಗಳಾದ ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ಯುವ ಧುರೀಣ–ರಾದ ಕೃಷ್ಣಗೌಡ ಪಾಟೀಲ, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ನಟರಾಜ ಜಿ.ಆರ್, ಹಿಂದುಳಿದ ವರ್ಗಗಳ ಇಲಾಖೆಯ ಜಿಲ್ಲಾ ಅಧಿಕಾರಿ ಎಂ.ಎಂ. ತುಂಬರಮಟ್ಟಿ, ರಾಜ್ಯ ಸಂಘದ ನಿರ್ದೇಶಕರುಗಳಾದ ಕಳಕನಗೌಡ ಗೌಡರ, ಚನ್ನಮ್ಮ ಹುಳಕಣ್ಣವರ, ಜಿಲ್ಲಾ, ತಾಲೂಕು ಸಂಘದ ಪದಾಧಿಕಾರಿಗಳು, ಸ್ಥಳೀಯ ಮುಖಂಡರುಗಳು ಹಾಗೂ ಸಮಾಜದ ಗಣ್ಯ ಅಧಿಕಾರಿಗಳು ಉಪಸ್ಥಿತರಿರುವರು ಎಂದು ಫಕೀರಪ್ಪ ಹೆಬಸೂರ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬಿ.ಬಿ. ಭಾವಿಕಟ್ಟಿ, ವೈ.ಡಿ. ಗುರಿಕಾರ, ಆರ್. ಎಂ. ನಿಂಬನಾಯ್ಕರ, ನಾಗಪ್ಪ ಗುಗ್ಗರಿ, ರಾಮಕೃಷ್ಣ ರೊಳ್ಳಿ, ನೀಲಕಂಠ ಮರಡಿ, ಶಿವಣ್ಣ ಸಿಂಗಟಾಲಕೇರಿ, ವೈ.ಡಿ. ಜಡದೆಲಿ, ಕೆ.ಬಿ. ಕಂಬಳಿ, ಎಸ್. ಎಸ್. ಕರಡಿ, ಬಿ.ಎಚ್. ಹ್ಯಾಟಿ, ಚನ್ನಮ್ಮ ಹುಳಕಣ್ಣವರ, ರೇಖಾ ಜಡಿ, ರವಿ ಹುಡೇದ, ಕುಮಾರ ಮಾರನಬಸರಿ, ರಾಮು ಜಡಿ ಮುಂತಾದವರು ಉಪಸ್ಥಿರಿದ್ದರು.

ಇದೇ ಸಂದರ್ಭದಲ್ಲಿ ಸ್ವತಂತ್ರ ಅಮೃತ ಮಹೋತ್ಸವ ಮುನ್ನಡೆ ಯೋಜನೆಯಡಿ ಅಲ್ಪಾವಧಿ ಕೌಶಲ್ಯಾಧಾರಿತ ಕೋರ್ಸ್‌ಗಳ ತರಬೇತಿ ಪಡೆದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ಮತ್ತು ಆಯ್ದ ಫಲಾನುಭವಿಗಳಿಗೆ ಹೊಲಿಗೆ ಯಂತ್ರ/ ಬ್ಯೂಟೀಷಿಯನ್ ಕಿಟ್/ ಕೌಶಲ್ಯಾಧಾರಿತ ಕಿಟ್ ವಿತರಣೆ ಮಾಡಲಾಗುವುದು ಎಂದು ಫಕೀರಪ್ಪ ಹೆಬಸೂರ ಮಾಹಿತಿ ನೀಡಿದರು.

## ಸಂಪಾದಕೀಯ

# ಜಿಎಸ್‌ಟಿ ಸಂಗ್ರಹದಲ್ಲಿ ದಾಖಲೆ ಏರಿಕೆ: ಆರ್ಥಿಕ ಪ್ರಗತಿಯ ಸೂಚಕ

ಕೇಂದ್ರ ಸರ್ಕಾರದ ಜಿಎಸ್‌ಟಿ (ಸರಕು ಮತ್ತು ಸೇವಾ ತೆರಿಗೆ) ಸಂಗ್ರಹವು ದಾಖಲೆಯ ಗರಿಷ್ಠ ಮಟ್ಟಕ್ಕೆ ಏರಿರುವುದು ದೇಶದ ಆರ್ಥಿಕತೆಗೆ ಶುಭಸೂಚಕವಾಗಿದೆ.

ಕೇವಲ ಐದು ವರ್ಷಗಳ ಹಿಂದೆ ವಾರ್ಷಿಕ 11 ಲಕ್ಷ ಕೋಟಿ ರೂಪಾಯಿಗಳಷ್ಟಿದ್ದ ಸಂಗ್ರಹವು ಈಗ 22 ಲಕ್ಷ ಕೋಟಿ ರೂಪಾಯಿಗಳಿಗೆ ದ್ವಿಗುಣಗೊಂಡಿರುವುದು ಜಿಎಸ್‌ಟಿ ವ್ಯವಸ್ಥೆಯ ಪರಿಣಾಮಕಾರಿತ್ವ ಮತ್ತು ಆರ್ಥಿಕ ಚಟುವಟಿಕೆಗಳ ಬೆಳವಣಿಗೆಯನ್ನು ಸ್ಪಷ್ಟವಾಗಿ ತೋರಿಸುತ್ತದೆ.

ಈ ಗಮನಾರ್ಹ ಏರಿಕೆಯು ತೆರಿಗೆ ಅನುಸರಣೆಯಲ್ಲಿನ ಸುಧಾರಣೆ, ಡಿಜಿಟಲೀಕರಣದ ವಿಸ್ತರಣೆ ಮತ್ತು ಸರ್ಕಾರದ ದಕ್ಷ ನಿರ್ವಹಣೆಯನ್ನು ಎತ್ತಿ ತೋರಿಸುತ್ತದೆ. ಜಿಎಸ್‌ಟಿ ಅನುಷ್ಠಾನದ ಆರಂಭಿಕ ಸವಾಲುಗಳ ನಂತರ, ವ್ಯವಸ್ಥೆಯು ಈಗ ಸ್ಥಿರತೆ ಪಡೆದಿದೆ ಮತ್ತು ತೆರಿಗೆ ಮೂಲವನ್ನು ವಿಸ್ತರಿಸುವಲ್ಲಿ ಯಶಸ್ವಿಯಾಗಿದೆ.

ಇದು ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ಅಭಿವೃದ್ಧಿ ಯೋಜನೆಗಳಿಗೆ ಅಗತ್ಯವಾದ ಸಂಪನ್ಮೂಲಗಳನ್ನು ಒದಗಿಸುತ್ತದೆ.

ಮುಂದಿನ ಮಹತ್ವದ ನಿರ್ಧಾರ

ಜಿಎಸ್‌ಟಿ ಸಂಗ್ರಹದ ಈ ಸಕಾರಾತ್ಮಕ ಪ್ರಗತಿಯ ನಡುವೆ, ಕೇಂದ್ರ ಸರ್ಕಾರವು ಪ್ರಮುಖ ನಿರ್ಧಾರವೊಂದನ್ನು ತೆಗೆದುಕೊಳ್ಳಲು ಮುಂದಾಗಿರುವುದು ಕುತೂಹಲ ಮೂಡಿಸಿದೆ.

ಈ ನಿರ್ಧಾರವು ಜಿಎಸ್‌ಟಿ ಸ್ವರೂಪದಲ್ಲಿ ಮತ್ತಷ್ಟು ಸುಧಾರಣೆ, ತೆರಿಗೆ ದರಗಳಲ್ಲಿ ಬದಲಾವಣೆ ಅಥವಾ ಹೊಸ ವಲಯಗಳನ್ನು ಜಿಎಸ್‌ಟಿ ವ್ಯಾಪ್ತಿಗೆ ತರುವ ಕುರಿತಾಗಿರಬಹುದು. ಆರ್ಥಿಕತೆಯನ್ನು ಮತ್ತಷ್ಟು ಬಲಪಡಿಸುವ ಮತ್ತು ಸಾಮಾನ್ಯ ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಈ ನಿರ್ಧಾರವು ಮಹತ್ವದ್ದಾಗಲಿದೆ. ಸರ್ಕಾರದ ಈ ನಡೆಯು ಆರ್ಥಿಕ ಸ್ಥಿರತೆಯನ್ನು ಇನ್ನಷ್ಟು ಬಲಪಡಿಸಿ, ಪ್ರಗತಿಯ ಪಥದಲ್ಲಿ ದೇಶವನ್ನು ಮುನ್ನಡೆಸಲು ಸಹಕಾರಿಯಾಗಲಿ ಎಂದು ಆಶಿಸೋಣ.

## ಶಾಲಾ ಸಂಸತ್ತು ರಚನೆಗೆ ಮೊಬೈಲ್ ಆ್ಯಪ್ ಬಳಕೆ; ವಿನೂತನ ಚುನಾವಣೆ ಪ್ರಕ್ರಿಯೆ

# ಆಸಕ್ತಿಯಿಂದ ಮತ ಚಲಾಯಿಸಿದ ವಿದ್ಯಾರ್ಥಿಗಳು

■ವಿಜಯಸಾಕ್ಷಿ ಸುದ್ದಿ, ಗದಗ

ಶಹರದ ಆ್ಯಂಗ್ಲೋ ಉರ್ದು ಬಾಲಕರ/ಬಾಲಕಿಯರ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಪ್ರಜಾಪ್ರಭುತ್ವದ ಮಹತ್ವವನ್ನು ಪ್ರಾಯೋಗಿಕವಾಗಿ ತಿಳಿಸಲು ಚುನಾವಣೆಯನ್ನು ಮೊಬೈಲ್ ಇವಿಎಂ ಬಳಸಿ ಮತದಾನ ಪ್ರಕ್ರಿಯೆ ನಡೆಸಲಾಯಿತು.

ಪ್ರಜಾಪ್ರಭುತ್ವದ ಮೌಲ್ಯ, ಮತದಾನದ ಮಹತ್ವ ಹಾಗೂ ವಿದ್ಯಾರ್ಥಿಗಳಲ್ಲಿ ನಾಯಕತ್ವದ ಗುಣ ಬೆಳೆಸುವ ಸಲುವಾಗಿ ಶಾಲೆಯಲ್ಲಿ ಶಾಲಾ ಸಂಸತ್ತು ಎಂಬ ವಿನೂತನ ಕಾರ್ಯಕ್ರಮ ಆಯೋಜಿಸಿ ಚುನಾವಣೆ ನಡೆಸಲಾಯಿತು. ವಿದ್ಯಾರ್ಥಿಗಳು ಮತದಾನ ಹಾಗೂ ಚುನಾವಣಾ ಪ್ರಕ್ರಿಯೆಯಲ್ಲಿ ಭಾಗಿಯಾಗಿ ಸಂತಸಪಟ್ಟರು.

ಮಕ್ಕಳಿಗೆ ಶಾಲೆಯ ವತಿಯಿಂದ ಚುನಾವಣಾ ಆಯೋಗ ನೀಡುವ ರೀತಿಯಲ್ಲೇ ಗುರುತಿನ ಚೀಟಿ ನೀಡಲಾಗಿತ್ತು. ಇದಕ್ಕೂ ಮೊದಲು ವಿಜ್ಞಾನ ಶಿಕ್ಷಕ ಇಸ್ಮಾಯಿಲ್ ಆರಿ ಮೊಬೈಲ್ ಇವಿಎಂ ಮೂಲಕ ಮತದಾನದ ಪ್ರಕ್ರಿಯೆ ಮತ್ತು ಮಾಹಿತಿಯನ್ನು ಒದಗಿಸಿದರು.



ವಿದ್ಯಾರ್ಥಿಗಳು ಮತದಾನದ ತಿಳುವಳಿಕೆಯನ್ನು ಪಡೆದುಕೊಂಡು ಮತದಾನದ ಪ್ರಕ್ರಿಯೆಯಲ್ಲಿ ಪಾಲ್ಗೊಂಡರು.

ಶಾಲಾ ಮುಖ್ಯಶಿಕ್ಷಕರು ಹಾಗೂ ಶಿಕ್ಷಕರು ಚುನಾವಣಾ ಅಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸಿದರೆ, ಮಕ್ಕಳು ತಮ್ಮ ಹಕ್ಕು ಚಲಾಯಿಸಿದರು. ಇದಕ್ಕೂ ಮುನ್ನ ಚುನಾವಣೆಯಲ್ಲಿ ಸ್ಪರ್ಧಿಸಲು ಮಕ್ಕಳು ಮುಖ್ಯ ಚುನಾವಣಾ ಅಧಿಕಾರಿ ಎಂ.ಎಂ. ಪೀರಜಾದೆ ಹಾಗೂ ಟಿ.ಐ. ಕಾಲೇಖಾನ ಅವರಿಗೆ ನಾಮಪತ್ರ ಸಲ್ಲಿಕೆ ಮಾಡಿದರು.

ಬಾಲಕರು 7 ಅಭ್ಯರ್ಥಿಗಳು, ಬಾಲಕಿಯರು 4 ಅಭ್ಯರ್ಥಿಗಳು ಚುನಾವಣಾ ಕಣದಲ್ಲಿ ಉಳಿದುಕೊಂಡರು. ನಂತರ ಶಾಲಾ ಮುಖ್ಯ ಚುನಾವಣಾಧಿಕಾರಿ ಎಂ.ಎಂ. ಪೀರಜಾದೆ ಮತ್ತು ಟಿ.ಐ. ಕಾಲೇಖಾನ ಮತ ಪೆಟ್ಟಿಗೆಗಳನ್ನು ಮತಗಟ್ಟೆ ಅಧಿಕಾರಿಗಳಿಗೆ ನೀಡಿದರು. ಮತದಾನ ಮಾಡುವ ವಿದ್ಯಾರ್ಥಿಗಳ ಎಡಗೈ ತೋರು ಬೆರಳಿಗೆ ಶಾಯಿ ಹಾಕಲಾಯಿತು. ಬಾಲಕರ ಶಾಲೆಯಲ್ಲಿದ್ದ ಒಟ್ಟು 120 ಮಕ್ಕಳಲ್ಲಿ 110 ಮಕ್ಕಳು ಮತದಾನ ಮಾಡಿದರು. ಮಧ್ಯಾಹ್ನದ ವೇಳೆಗೆ ಮತ ಎಣಿಕೆ ಮಾಡಲಾಗಿ, ಒಟ್ಟು 7 ಅಭ್ಯರ್ಥಿಗಳ ಪೈಕಿ 2 ಮಂದಿ ಬಹುಮತದಿಂದ ಶಾಲಾ ಸಂಸತ್ತಿಗೆ ಆಯ್ಕೆಯಾದರು. ಬಾಲಕಿಯರ ಶಾಲೆಯಲ್ಲಿದ್ದ ಒಟ್ಟು 192 ಮಕ್ಕಳಲ್ಲಿ 147 ಮಕ್ಕಳು ಮಾತದಾನ ಮಾಡಿದರು. ಮಧ್ಯಾಹ್ನದ ವೇಳೆಗೆ ಮತ ಎಣಿಕೆ ಮಾಡಲಾಯಿತು. 4 ಅಭ್ಯರ್ಥಿಗಳು 2 ವಿದ್ಯಾರ್ಥಿಗಳು ಬಹುಮತದಿಂದ ಶಾಲಾ ಸಂಸತ್ತಿಗೆ ಆಯ್ಕೆಯಾದರು.

> ಶಾಲಾ ಸಂಸತ್ತು ರಚನೆ ಮಾಡಲು ಪ್ರಸ್ತುತ ದಿನಮಾನಗಳಲ್ಲಿ ಆಧುನಿಕ ತಂತ್ರಜ್ಞಾನ ಬಳಸಿ ಮತದಾನದ ಹಕ್ಕನ್ನು ಪಾರದರ್ಶಕವಾಗಿ ಅಳವಡಿಸಲಾಗಿದೆ. ವಿದ್ಯಾರ್ಥಿ ಜೀವನದಲ್ಲಿಯೇ ಮಕ್ಕಳಿಗೆ ಮತದಾನದ ಪ್ರಕ್ರಿಯೆ ಮತ್ತು ಅವರ ಮಾಹಿತಿಯನ್ನು ಒದಗಿಸಿದರೆ ಮುಂದಿನ ಚುನಾವಣೆಗಳಲ್ಲಿ ಎಲ್ಲರೂ ಆಸಕ್ತಿಯಿಂದ ಮತದಾನ ಮಾಡಲು ಮುಂದಾಗುತ್ತಾರೆ. ಇವಿಎಂ ಮೊಬೈಲ್ ಆ್ಯಪ್ ಮೂಲಕ ಸಿಯು, ಬಿಯು, ಪಿವಿವಿಪಿಎಟ್ ಬಗ್ಗೆ ಮಕ್ಕಳಲ್ಲಿ ಹೆಚ್ಚಿನ ಅರಿವು ಮೂಡಿಸಲಾಗಿದೆ.
>
> – ಇಸ್ಮಾಯಿಲ್ ಆರಿ.
> ಬಾಲಕರ ಪ್ರೌಢಶಾಲೆಯ ವಿಜ್ಞಾನ ಶಿಕ್ಷಕ.

ಮಕ್ಕಳಿಗೆ ಚುನಾವಣೆ ಪ್ರಕ್ರಿಯೆ ಬಗ್ಗೆ ಅರಿವು ಮೂಡಿಸಲು ನಡೆಸಿದ ಚುನಾವಣೆಯಲ್ಲಿ ವಿದ್ಯಾರ್ಥಿಗಳು ಉತ್ಸಾಹದಿಂದಲೇ ಭಾಗಿಯಾಗಿ ಹೊಸ ಅನುಭವ ಪಡೆದುಕೊಂಡರು. 10ನೇ ತರಗತಿಯ ವಿದ್ಯಾರ್ಥಿ ಎಸ್.ಕೆ. ಬಾಗೇವಾಡೆ ಪ್ರಧಾನ ಮಂತ್ರಿಯಾಗಿ, 10ನೇ ತರಗತಿ ವಿದ್ಯಾರ್ಥಿ ಎ.ಡಿ. ಉಳ್ಳಗಡ್ಡಿ ಉಪ ಮುಖ್ಯಮಂತ್ರಿಯಾಗಿ ಆಯ್ಕೆಯಾದರು. ಬಾಲಕಿಯರ ಪ್ರೌಢಶಾಲೆಯ 10ನೇ ತರಗತಿ ವಿದ್ಯಾರ್ಥಿನಿ ಮೀನಾಜ್ ಕಲ್ಲಿಪಣ್ಣವರ ಪ್ರಧಾನ ಮಂತ್ರಿ, ತನ್ನಜಿಮ್ ಕೊಪ್ಪಳ ಉಪಪ್ರಧಾನಿಯಾಗಿ ಆಯ್ಕೆಯಾದರು.

ಶಾಲಾ ಸಂಸತ್ತು ಚುನಾವಣಾ ಉದ್ಘಾಟನಾ ಸಮಾರಂಭವನ್ನು ಉದ್ದೇಶಿಸಿ ಶಾಲಾ ಆಡಳಿತ ಮಂಡಳಿ ಸದಸ್ಯ ಎ.ಎಂ. ಮುಲ್ಲಾ ಮಾತನಾಡಿದರು. ಸಯ್ಯದ್‌ಇಸ್ಮಾಯಿಲ್ ಬಿಜಾಪೂರ, ಬಾಲಕಿಯರ ಪ್ರೌಢಶಾಲೆಯ ಮುಖ್ಯಶಿಕ್ಷಕ ಎಲ್.ಆರ್. ಇಟಗಿ, ಎಂ.ಎ. ರಿಕಾರ್ಟೆ, ಫೈರೋಜ ಡಲಾಯಿತ, ಎಂ.ಎಂ. ಪೀರಜಾದೆ, ಎಂ.ಜಿ. ಪಟೇಲ್, ಎನ್.ಕೆ. ಕರಡಿ, ಎಂ.ಎ. ಕಮಾನಗಾರ, ಎಸ್.ಐ. ನದಾಫ್, ಝಡ್.ಎ. ಮುಲ್ಲಾ, ಟಿ.ಐ. ಕಾಲೇಖಾನ, ಎಂ.ಎಚ್. ಜಮಾಲಸಾಬನವರ ಸೇರಿದಂತೆ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಶಾಲಾ ಮಣ್ಣು ಆರೋಗ್ಯ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಕೃಷಿಯಲ್ಲಿ ಮಣ್ಣಿನ ಆರೋಗ್ಯವು ಪ್ರಮುಖ ಪಾತ್ರ ವಹಿಸಿದ್ದು, ಸಮತೋಲಿತ ಗೊಬ್ಬರ ಬಳಕೆ ಮತ್ತು ಮಣ್ಣು ಆರೋಗ್ಯದ ಬಗ್ಗೆ ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ರೈತರಲ್ಲಿ ಜಾಗೃತಿಯನ್ನು ಮೂಡಿಸುವ ಉದ್ದೇಶದಿಂದ, ಕೇಂದ್ರ ಸರ್ಕಾರವು 'ಶಾಲಾ ಮಣ್ಣು ಆರೋಗ್ಯ ಕಾರ್ಯಕ್ರಮ'ದ ಮಣ್ಣು ಆರೋಗ್ಯ ಕಾರ್ಡ್ ಯೋಜನೆಯನ್ನು ಶಾಲೆಗಳಿಗೆ ಪರಿಚಯಿಸಿದೆ. ಈ ಕಾರ್ಯಕ್ರಮದಡಿ ವಿದ್ಯಾರ್ಥಿಗಳಿಗೆ ಮಣ್ಣು ಮಾದರಿ ಸಂಗ್ರಹಣೆ, ಮಣ್ಣು ಪರೀಕ್ಷೆ ಮತ್ತು ಮಣ್ಣು ಆರೋಗ್ಯ ಕಾರ್ಡ್‌ಗಳನ್ನು ಅರ್ಥೈಸುವ ಕುರಿತು ತರಬೇತಿಯನ್ನು ನೀಡಲಾಗುತ್ತದೆ. ಅಲ್ಲದೇ, ಸ್ಥಳೀಯ ಕೃಷಿಕ ಸಮಾಜದ ಪಾಲ್ಗೊಳ್ಳುವಿಕೆಯಿಂದ ಶಾಲೆ ಮತ್ತು ರೈತರ ನಡುವೆ ಸಮನ್ವಯ ನಿರ್ಮಾಣವಾಗಲಿದೆ.

ಈ ಕಾರ್ಯಕ್ರಮವು 2024–25ನೇ ಸಾಲಿನಿಂದ ಅನುಷ್ಠಾನವಾಗಿದ್ದು, ರಾಜ್ಯದ ವಿವಿಧ ಜಿಲ್ಲೆಗಳ 42 EMRS, JNV, ಕೇಂದ್ರೀಯ ವಿದ್ಯಾಲಯಗಳು ಹಾಗೂ ರಾಜ್ಯ ಸರ್ಕಾರಿ ಶಾಲೆಗಳಲ್ಲಿ ಅನುಷ್ಠಾನಗೊಂಡಿದೆ. ಜಿಲ್ಲೆಯಲ್ಲಿ ಸದರಿ ಕಾರ್ಯಕ್ರಮವನ್ನು ಜವಾಹರಲಾಲ್ ನೆಹರು ವಿದ್ಯಾಲಯ,–ಕೊರ್ಲಹಳ್ಳಿ, ಮುಂಡರಗಿಯಲ್ಲಿ ಅನುಷ್ಠಾನಗೊಳಿಸಲಾಗಿದೆ. ಶಾಲೆಯಲ್ಲಿ ವಿದ್ಯಾರ್ಥಿಗಳ ಗುಂಪುಗಳನ್ನು ಮಾಡಿ, ಪ್ರತಿ ಗುಂಪುಗಳಿಂದ ನಿಗದಿತ ಸಂಖ್ಯೆಯ ಮಣ್ಣು ಮಾದರಿಗಳನ್ನು ಸಂಗ್ರಹಿಸಿ, ನುರಿತ ವಿಶ್ಲೇಷಕರು ಮತ್ತು ಶಿಕ್ಷಕರ ಸಮ್ಮುಖದಲ್ಲಿ ವಿದ್ಯಾರ್ಥಿಗಳಿಂದ ಮಾದರಿಗಳನ್ನು ವಿಶ್ಲೇಷಿಸಲಾಗುತ್ತದೆ. ವಿಶ್ಲೇಷಣಾ ಫಲಿತಾಂಶಗಳನ್ನು ಮಣ್ಣು ಆರೋಗ್ಯ ಚೀಟಿಗಳ ಮೂಲಕ ಸಂಬಂಧಿಸಿದ ರೈತರಿಗೆ ನೀಡಲಾಗುತ್ತದೆ. 2024–25ರಲ್ಲಿ ಸದರಿ ಕಾರ್ಯಕ್ರಮದಡಿ 50 ರೈತರ ತಾಕುಗಳ ಮಣ್ಣು ಮಾದರಿಗಳನ್ನು ಸಂಗ್ರಹಿಸಿ, ವಿಶ್ಲೇಷಿಸಿ, ಮಣ್ಣು ಆರೋಗ್ಯ ಚೀಟಿಗಳನ್ನು ನೀಡಲಾಗಿದೆ.

ಪ್ರಸಕ್ತ ಸಾಲಿನಲ್ಲಿಯೂ ರಾಜ್ಯದಲ್ಲಿ ಕಾರ್ಯಕ್ರಮ ಮುಂದುವರೆದಿದ್ದು, ಪಿ.ಎಂ.ಶ್ರೀ ಶಾಲೆಗಳಿಗೂ ವಿಸ್ತರಿಸಲು ಆಯೋಜಿಸಲಾಗಿದೆ. ಜಿಲ್ಲೆಯಲ್ಲಿ ಸದರಿ ಕಾರ್ಯಕ್ರಮದಡಿ 50 ಮಣ್ಣು ಮಾದರಿಗಳನ್ನು ಸಂಗ್ರಹಿಸುವ ಗುರಿಯಿದೆ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

## ಪ್ರವೀಣ್ ನೆಟ್ಟಾರು ಹತ್ಯೆ ಪ್ರಕರಣ – ಪ್ರಮುಖ ಆರೋಪಿಯನ್ನು ಬಂಧಿಸಿದ NIA

■ವಿಜಯಸಾಕ್ಷಿ ಸುದ್ದಿ, ಮಂಗಳೂರು

ಬಿಜೆಪಿ ಕಾರ್ಯಕರ್ತ ಪ್ರವೀಣ್ ನೆಟ್ಟಾರು ಹತ್ಯೆ ಪ್ರಕರಣದ ಪ್ರಮುಖ ಆರೋಪಿಯನ್ನು ರಾಷ್ಟ್ರೀಯ ತನಿಖಾ ಸಂಸ್ಥೆ ಇಂದು ಬಂಧಿಸಿದೆ. ಬಂಧಿತ ಆರೋಪಿಯನ್ನು ಅಬ್ದುಲ್ ರೆಹಮಾನ್ ಎಂದು ಗುರುತಿಸಲಾಗಿದೆ. ಕತಾರ್‌ನಿಂದ ಕೇರಳದ ಕಣ್ಣೂರು ವಿಮಾನ ನಿಲ್ದಾಣಕ್ಕೆ ಬಂದಿಳಿಯುತ್ತಿದ್ದಂತೆ ಎನ್‌ಐಎ ಅಧಿಕಾರಿಗಳು ಆರೋಪಿಯನ್ನು ಅರೆಸ್ಟ್ ಮಾಡಿದ್ದಾರೆ.

**ಘಟನೆ ವಿವರ:** ನಿಷೇಧಿತ ಪಾಪ್ಯುಲರ್ ಫ್ರಂಟ್ ಆಫ್ ಇಂಡಿಯಾ ಸದಸ್ಯರು 2022ರ ಜುಲೈ 26ರಂದು ಕರ್ನಾಟಕದ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ಳಾರೆ ಗ್ರಾಮದಲ್ಲಿ ನೆಟ್ಟಾರು ಅವರನ್ನು ಬರ್ಬರವಾಗಿ ಹತ್ಯೆ ಮಾಡಿದ್ದರು. ದೆಹಲಿ ಕಚೇರಿಯಲ್ಲಿ ಎಫ್‌ಐಆರ್ ದಾಖಲಿಸಿಕೊಂಡು ತನಿಖೆ ಶುರು ಮಾಡಿದ್ದ ಎನ್‌ಐಎ ಓರ್ವ ಪ್ರಮುಖ ಆರೋಪಿ ಅತೀಖ್ ಅಹ್ಮದ್ ಸೇರಿ 22 ಆರೋಪಿಗಳನ್ನ ಬಂಧಿಸಿತ್ತು. ಒಟ್ಟು 28 ಆರೋಪಿಗಳ ವಿರುದ್ಧ ಜಾರ್ಜ್‌ಶೀಟ್ ಸಲ್ಲಿಸಿದ್ದ ಎನ್‌ಐಎ ಉಳಿದ 6 ಆರೋಪಿಗಳಿಗೆ ತೀವ್ರ ಹುಡುಕಾಟ ನಡೆಸಿತ್ತು. ಪ್ರಕರಣದ ಇತರ ಆರೋಪಿಗಳು ಸಿಕ್ಕಿಬೀಳುತ್ತಿದ್ದಂತೆ ವಿದೇಶಕ್ಕೆ ಹಾರಿದ್ದ ಅಬ್ದುಲ್ ರಹಿಮಾನ್‌ನನ್ನು ಶುಕ್ರವಾರ NIA ಬಂಧಿಸುವಲ್ಲಿ ಯಶಸ್ವಿಯಾಗಿದೆ.

## 'ಸಿರಿಸಿಂಗಾರಿ ಭಾಗ್ಯದಂಬಾರಿ' ಯಕ್ಷಗಾನ ಪ್ರದರ್ಶನ




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶ್ರೀ ವೀರನಾರಾಯಣ ಕಲ್ಯಾಣ ಮಂಟಪದಲ್ಲಿ ಶ್ರೀ ಸಿದ್ಧಿವಿನಾಯಕ ಪ್ರಸಾದಿತ ಯಕ್ಷಗಾನ ಮಂಡಳಿ ಶ್ರೀ ಕ್ಷೇತ್ರ ಹಟ್ಟಿಯಂಗಡಿ ಇವರು ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಯಕ್ಷಕವಿ ಬೇಳೂರು ವಿಷ್ಣುಮೂರ್ತಿ ನಾಯಕ್ ವಿರಚಿತ 'ಸಿರಿಸಿಂಗಾರಿ ಭಾಗ್ಯದಂಬಾರಿ' ಎಂಬ ಯಕ್ಷಗಾನವನ್ನು ಪ್ರದರ್ಶಿಸಿದರು.

ವಿ.ಆ. ವೀರಚಂದ್ರಹಾಸ ಚಲನಚಿತ್ರದ ಕಥಾನಾಯಕ ಶಿಥಿಲ್ ಶೆಟ್ಟಿ, ನಾಯಕ ನಟಿ ನಾಗಶ್ರೀ ಅಭಿನಯಿಸಿದ ಈ ಯಕ್ಷಗಾನವನ್ನು ಹೋಟೇಲ್ ಒಡೆಯರ ಸಂಘದ ಗದಗ ಜಿಲ್ಲಾಧ್ಯಕ್ಷ ವಿಶ್ವನಾಥ ಶೆಟ್ಟಿ ಉದ್ಘಾಟಿಸಿ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಹೋಟೇಲ್ ಒಡೆಯರ ಸಂಘದಿಂದ ಗದಗ ನಗರದಲ್ಲಿ ಕರಾವಳಿಯ ಪ್ರಸಿದ್ಧ ಯಕ್ಷಗಾನ ಕಲೆಯನ್ನು ಗದಗ ಜನತೆಗೆ ಪ್ರದರ್ಶಿಸಲು ಆಗಮಿಸಿದ ಈ ತಂಡಕ್ಕೆ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುವೆ ಎಂದರು.

ಇದೇ ಸಂದರ್ಭದಲ್ಲಿ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಕಾವೆಂಶ್ರೀರವರ ನಿಧನಕ್ಕೆ 2 ನಿಮಿಷ ಮೌನಾಚರಣೆ ಮಾಡಿ ಗೌರವ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಸುಧಾಕರ ಶೆಟ್ಟಿ, ರಂಜಿತ ಶೆಟ್ಟಿ, ಯು.ಬಿ. ಹುಬ್ಬಳ್ಳಿ, ಸುಕುಮಾರ ಶೆಟ್ಟಿ, ಜಯಪಾಲಶೆಟ್ಟಿ, ಶಿವಯ್ಯ ನಾಲ್ವಾತಡಮಠ, ನಾಗಶ್ರೀ ಜಿ.ಎಸ್., ಶಿಥಿಲ್ ಶೆಟ್ಟಿ, ಜಯದೇವ ಭಟ್ಟ ಸೇರಿದಂತೆ ಚೇಂಬರ್ ಆಫ್ ಕಾಮರ್ಸ್ ಅಸೋಸಿಯೇಶನ್ ಗದಗ, ಬಾರ್ ಅಸೋಸಿಯೇಶನ್ ಗದಗ, ರೋಟರಿ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# 'ಮುನ್ನುಡಿ' ಚಲನಚಿತ್ರ ಪ್ರದರ್ಶನ



■ವಿಜಯಸಾಕ್ಷಿ ಸುದ್ದಿ, ಗದಗ

ಮಹಾವಿದ್ಯಾಲಯದ ವಿದ್ಯಾರ್ಥಿಗಳ ಸರ್ವಾಂಗೀಣ ಪ್ರಗತಿಗೆ ಕೇವಲ ಕ್ಲಾಸ್ ರೂಮ್, ಪಾಠ–ಪ್ರವಚನಗಳಷ್ಟೇ ಅಲ್ಲ, ವಿದ್ಯಾರ್ಥಿಗಳ ಸಾಧನೆಗೆ ಪ್ರೇರಣೆಯಾಗುವ ಚಿತ್ರ ವೀಕ್ಷಣೆಯೂ ಬಲು ಅಗತ್ಯ ಎಂಬುದನ್ನು ಮನಗಂಡು ನಮ್ಮ ಮಹಾವಿದ್ಯಾಲಯದಲ್ಲಿ ವಿದ್ಯಾರ್ಥಿಗಳಿಗೆ 'ಮುನ್ನುಡಿ' ಚಲನಚಿತ್ರ ಪ್ರದರ್ಶನಕ್ಕೆ ಅನುಮತಿ ನೀಡಲಾಗಿದೆ ಎಂದು ಮಹಾವಿದ್ಯಾಲಯದ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ ಹೇಳಿದರು. ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯದಲ್ಲಿ 'ಮುನ್ನುಡಿ' ಚಲನಚಿತ್ರ ಪ್ರದರ್ಶನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಂಸ್ಥೆಯ ನಿರ್ದೇಶಕ ಪ್ರೊ. ಸೈಯ್ಯದ್ ಮತೀನ್ ಮುಲ್ಲಾ ಸಾಂದರ್ಭಿಕವಾಗಿ ಮಾತನಾಡಿದರು. ಮಹಾ ವಿದ್ಯಾಲಯದ ವಿಜ್ಞಾನ ಹಾಗೂ ವಾಣಿಜ್ಯ ವಿಭಾಗದ ಎಲ್ಲ ವಿದ್ಯಾರ್ಥಿಗಳೂ ಚಿತ್ರವನ್ನು ವೀಕ್ಷಿಸಿ ಮೆಚ್ಚಿ, ಸಾಧನೆಗೆ ಪಣ ತೊಟ್ಟರು.

ವೇದಿಕೆಯ ಮೇಲೆ ಸಂಸ್ಥೆಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ, ನಿರ್ದೇಶಕರಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ರಾಹುಲ್ ಒಡೆಯರ್, ಪ್ರೊ. ಪುನೀತ್ ದೇಶಪಾಂಡೆ, ಪ್ರೊ. ಸೈಯ್ಯದ್ ಮತೀನ್ ಮುಲ್ಲಾ, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ, ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ, ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ರಕ್ತಕ್ಕೆ ರಕ್ತವೇ ಉತ್ತರವಾಗಬೇಕು: ಸಾಮಾಜಿಕ ಜಾಲತಾಣಗಳಲ್ಲಿ ಪ್ರಚೋದನಕಾರಿ ಸ್ಟೇಟಸ್ ಹಾಕಿದ್ದ ಯುವಕ ಅರೆಸ್ಟ್!

■ವಿಜಯಸಾಕ್ಷಿ ಸುದ್ದಿ, ಮಂಗಳೂರು

ಸಾಮಾಜಿಕ ಜಾಲತಾಣಗಳಲ್ಲಿ ಪ್ರಚೋದನಕಾರಿ ಸ್ಟೇಟಸ್ ಹಾಕಿದ್ದ ಯುವಕನನ್ನು ಇದೀಗ ಅರೆಸ್ಟ್ ಮಾಡಲಾಗಿದೆ.

ಕರಾವಳಿಯಲ್ಲಿ ಕೋಮು ಸಂಘರ್ಷವನ್ನು ತಡೆಗಟ್ಟಲು ಸ್ಪೆಷಲ್ ಆ್ಯಕ್ಷನ್ ಫೋರ್ಸ್ ಫುಲ್ ಆ್ಯಕ್ಟೀವ್ ಆಗಿದ್ದು, ಪ್ರಚೋದನಾಕಾರಿ ಪೋಸ್ಟ್ ಹಾಕುವವರನ್ನು ಬೆನ್ನಟ್ಟಿ ಬೆಂಡೆತ್ತುತ್ತಿದೆ. "ರಕ್ತಕ್ಕೆ ರಕ್ತವೇ ಬೇಕು" ಎಂದು ಸ್ಟೇಟಸ್ ಹಾಕಿದ ಯುವಕನನ್ನು ಬಂಧಿಸಲಾಗಿದೆ.

ಉಡುಪಿ ಜಿಲ್ಲೆಯ ಕಾರ್ಕಳ, ಇರ್ವತ್ತೂರು ಗ್ರಾಮದ ಆಶಿಕ್ ಎಸ್ ಕೋಟ್ಯಾನ್ ಎಂಬಾತನನ್ನು ಸ್ಪೆಷಲ್ ಆ್ಯಕ್ಷನ್ ಫೋರ್ಸ್ ಬಂಧಿಸಿದೆ.

# ಜ್ಞಾನ ಸಾಧನೆಯೆಂಬುದು ತಪಸ್ಸಿದ್ದಂತೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪ್ರವಚನ ಬದುಕಿಗೆ ಬೆಳಕು ನೀಡುತ್ತದೆ. ಉತ್ತರ ಕರ್ನಾಟಕದ ಜನರಲ್ಲಿ ಭಕ್ತಿ ಭಾವ ಹೆಚ್ಚು ಕಾಣುತ್ತದೆ ಎಂದು ಮಾಜಿ ಶಾಸಕ ಡಿ.ಆರ್. ಪಾಟೀಲ ಅಭಿಪ್ರಾಯಪಟ್ಟರು.

ಅವರು ಬುಧವಾರ ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿ ಕಲಾಭವನದಲ್ಲಿ ವಾದಿರಾಜ ರಾಯ್ಕರ ಅವರು ಆಯೋಜಿಸಿದ್ದ ಸಂಕಷ್ಟಹರ ಗಣಪತಿ ವೃತದ ಉದ್ಯಾಪನಾ ಮಹಾಯಾಗದ ಉದ್ಘಾಟನಾ ನೆರವೇರಿಸಿ ಮಾತನಾಡಿದರು.

ನೀಲಗುಂದದ ಗುದ್ನೇಶ್ವರ ಮಠದ ಪ್ರಭುಲಿಂಗದೇವರು ಮಾತನಾಡಿ, ಜ್ಞಾನ ಸಾಧನೆ ಪರಿಶ್ರಮದಿಂದ ಬರುತ್ತದೆ. ಅದೊಂದು ತಪಸ್ಸು. ಅವರ ತಪಸ್ಸಿನ ಫಲ ನಮಗೂ ಪ್ರಾಪ್ತಿಯಾಗುತ್ತದೆ. ರಾಯ್ಕರ ಕುಟುಂಬ ಜ್ಞಾನ ಹಂಚುವ ಕೆಲಸ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಆಶೀರ್ವಚನ ನೀಡಿದ ಧಾರವಾಡ ಮುರುಘಾಮಠ ಹಾಗೂ ಮುಳಗುಂದ ಗವಿಮಠದ ಅಧ್ಯಕ್ಷರಾದ ಮಲ್ಲಿಕಾರ್ಜುನ ಸ್ವಾಮೀಜಿ ಮಾತನಾಡಿ, ನಾಡು ಕಂಡ ಅದ್ವಿತೀಯ ಪ್ರವಚನಕಾರ ಪಾವಗಡ ಪ್ರಕಾಶ ರಾವ್. ಇಂದು ಮಹಾಕಾವ್ಯಗಳನ್ನು ಓದುವವರೇ ಇಲ್ಲ. ಆಧ್ಯಾತ್ಮ ಪ್ರವಚನ ಎಂದರೆ ಸತ್ಯದ ಅರಿವು. ಮುನಿಗಳು ವಾಸಿಸಿದ ಈ ಮುನಿಪುರದಲ್ಲಿ ಅದೇ ಸಂಸ್ಕಾರ ಮುಂದುವರೆದಿದೆ. ಮನುಷ್ಯನಲ್ಲಿ ಜ್ಞಾನವಿದ್ದಾಗ ಬದುಕು ಬಂಗಾರ. ಅಧ್ಯಾತ್ಮದಲ್ಲಿ ನಿಮ್ಮನ್ನೂ ತೊಡಗಿಸಿಕೊಳ್ಳಿ ಎಂದರು.

ಮುಖ್ಯ ಆಹ್ವಾನಿತರಾಗಿ ಪಾವಗಡ ಪ್ರಕಾಶ ರಾವ್, ಸಾಗರದ ರವೀಂದ್ರ ಮುದ್ರಣಾಲಯದ ವಾಯ್.ಎ. ದಂತಿ, ವೈದ್ಯರಾದ ಡಾ. ಎಸ್.ಸಿ. ಚವಡಿ, ಗದಗ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಗುರಣ್ಣ ಬಳಗಾನೂರ, ಎಸ್‌ಜೆಜೆಎಂ ಸಂಯುಕ್ತ ಮಹಾವಿದ್ಯಾಲಯದ ಚೇರಮನ್ ಎಂ.ಡಿ. ಬಟ್ಟೂರ ಭಾಗವಹಿಸಿದ್ದರು. ಸಿದ್ದು ವೈ.ಕೆ ಸ್ವಾಗತಿಸಿದರು. ಪ್ರಾಚಾರ್ಯ ಎಸ್.ಎ. ಯಳವತ್ತಿ ನಿರೂಪಿಸಿದರು.

## ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಪ್ರತಿಭಾ ಪುರಸ್ಕಾರ ಮಾಲಿಕೆ–4

# ಅಣ್ಣಿಗೇರಿ ಆಶ್ರಮದಿಂದ ನಿತ್ಯ ಅಕ್ಷರ ದಾಸೋಹ

■ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣ ಪ್ರೇಮಿ, ತ್ಯಾಗಜೀವಿ ಬಿ.ಜಿ. ಅಣ್ಣಿಗೇರಿ ಗುರುಗಳು ಶಿಕ್ಷಣ ಕ್ಷೇತ್ರಕ್ಕೆ ಸಲ್ಲಿಸಿದ ಸೇವೆ ಅಮೋಘವಾದದ್ದು. ಗುರುಕುಲ ಮಾದರಿಯ ಆಶ್ರಮದಲ್ಲಿ ಇಂದಿಗೂ ನಿತ್ಯ ಅನುಭವಿಕ ಶಿಕ್ಷಕ ತಂಡದಿಂದ 'ಅಕ್ಷರ ದಾಸೋಹ' ನಡೆದಿರುವದು ಅಭಿನಂದನೀಯ ಎಂದು ಗದುಗಿನ ಹಿರಿಯ ತೆರಿಗೆ ಸಲಹೆಗಾರರಾದ ಮುಕುಂದ ಪೋತ್ನೀಸ್ ಹೇಳಿದರು.

ಅವರು ಗುರುವಾರ ಗದಗ ತಾಲೂಕಿನ ಅಂತೂರಬೆಂತೂರ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ಎಸ್.ಎಸ್.ಎಲ್.ಸಿಯಲ್ಲಿ ಮೊದಲ 5 ಸ್ಥಾನಗಳನ್ನು ಪಡೆದುಕೊಂಡ ಗದಗ ತಾಲೂಕಿನ ಸರ್ಕಾರಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಮಾತನಾಡಿದರು.

ಶಿಕ್ಷಕರಾಗಿ, ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸುತ್ತಿದ್ದ ಅಣ್ಣಿಗೇರಿ ಗುರುಗಳು ಗದುಗಿನಲ್ಲಿ ತಾವಿದ್ದ ಕೊಠಡಿಯಲ್ಲಿ ಕೆಲವು ವಿದ್ಯಾರ್ಥಿಗಳಿಗೆ ಟ್ಯೂಶನ್ ಹೇಳುವ ಪರಿಪಾಠವಿಟ್ಟುಕೊಂಡವರು. ಈ ಟ್ಯೂಶನ್ ಹೇಳುವ ಸುದ್ದಿ ಇತರ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿ ಕಾಲಕ್ರಮೇಣ ಅದು ಗುರುಕುಲ ಮಾದರಿಯಲ್ಲಿ ಬೆಳೆದು ಬಂತು. ಅವರ ತರುವಾಯ ಅವರ ಶಿಷ್ಯರು ಈ ಗುರುಕುಲವನ್ನು ಪ್ರಗತಿಪಥದಲ್ಲಿ ಮುನ್ನಡೆಸಿಕೊಂಡು ಬಂದಿರುವದು ಶ್ಲಾಘನೀಯ ಎಂದರು.




ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಅಧ್ಯಕ್ಷತೆಯನ್ನು ಆರ್.ಡಿ. ಜೋಶಿ ವಹಿಸಿದ್ದರು. ವೇದಿಕೆಯ ಮೇಲೆ ಪ್ರತಿಷ್ಠಾನದ ಕಾರ್ಯದರ್ಶಿ ಸುಭಾಸಚಂದ್ರ ಬೆಟ್ಟದೂರ, ಶಿವಾನಂದ ಕತ್ತಿ, ಸಹಾಯಕರಾದ ನೇಹಾ, ಸುಧಾರಾಣಿ, ಗ್ರಾಮದ ಗಣ್ಯರಾದ ನಿಂಗಪ್ಪ ಮ್ಯಾಗೇರಿ ಉಪಸ್ಥಿತರಿದ್ದರು.

ಶಾಲೆಯ ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ಈಶ್ವರಿ ದೊಡ್ಡಗೌಡ್ರ, ಸಂಜನಾ ಗಾಣಿಗೇರ, ಸಾಕ್ಷೀ ಜನಗೊಣ್ಣವರ, ದೀಪಾ ಯಂಗಾಡಿ, ಯಶೋದಾ ಬಾವಿಕಟ್ಟಿ ಅವರುಗಳಿಗೆ ನಗದು ಪುರಸ್ಕಾರದ ಚೆಕ್, ಪ್ರಮಾಣಪತ್ರ ನೀಡಲಾಯಿತು. ಶಿಕ್ಷಕ ಪಿ.ಸಿ. ಸೊಲಬಣ್ಣವರ ಸ್ವಾಗತಿಸಿ ವಂದಿಸಿದರು.

ಹುಲಕೋಟಿಯಲ್ಲಿ: ಹುಲಕೋಟಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಲಕ್ಷ್ಮೀ ಹಿರೇಮಠ, ಅಪೂರ್ವ ಲಕ್ಷ್ಮೇಶ್ವರ, ಪವಿತ್ರಾ ಅಕ್ಕಿ, ಸಪ್ನಾ ಕಲಾಲ, ಮಧು ಬಳ್ಳಾರಿ ಅವರುಗಳಿಗೆ ಅವರುಗಳಿಗೆ ನಗದು ಪುರಸ್ಕಾರದ ಚೆಕ್, ಪ್ರಮಾಣಪತ್ರ ನೀಡಿ ಗೌರವಿಸಲಾಯಿತು.

ಅಧ್ಯಕ್ಷತೆಯನ್ನು ಎಸ್.ಎ. ಖಾನ್ ವಹಿಸಿದ್ದರು. ಯೋಗೇಶ್ ಕುಮಾರ ಸ್ವಾಗತಿಸಿದರು, ಪಿ.ಪಿ. ಟಿಕಾರೆ ನಿರೂಪಿಸಿದರು. ಕೊನೆಗೆ ಎಸ್.ಎಚ್. ಮುಲ್ಲಾ ವಂದಿಸಿದರು. ಪ್ರತಿಷ್ಠಾನದ ಕಾರ್ಯದರ್ಶಿ ಸುಭಾಸಚಂದ್ರ ಬೆಟ್ಟದೂರ, ಶಿವಾನಂದ ಕತ್ತಿ, ಸಿದ್ದು ಕವಲೂರ, ತೋಂಟೇಶ ವೀರಲಿಂಗಯ್ಯನಮಠ, ಭಾರತಿ ಪಾಟೀಲ ನೇಹಾ, ಸುಧಾರಾಣಿ, ಅನ್ನಪೂರ್ಣ ಹಿತ್ತಲಮನಿ ಮುಂತಾದವರಿದ್ದರು.

### ಇಂದಿನ ಕಾರ್ಯಕ್ರಮ

ಜುಲೈ 5ರಂದು ಮುಂಜಾನೆ 10.30 ಗಂಟೆಗೆ ಗದಗ ತಾಲೂಕಿನ ಹರ್ಲಾಪೂರ ಗ್ರಾಮದ ಸರ್ಕಾರಿ ಪ್ರೌಢಶಾಲೆ, ಮಧ್ಯಾಹ್ನ 12 ಗಂಟೆಗೆ ಹಾತಲಗೇರಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವದು ಎಂದು ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ತಿಳಿಸಿದ್ದಾರೆ.

# ರಾಷ್ಟ್ರೀಯ ಚಾರ್ಟರ್ಡ್ ಅಕೌಂಟೆಂಟ್ಸ್ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಗದಗ ಸೆಂಟ್ರಲ್ ವತಿಯಿಂದ ರಾಷ್ಟ್ರೀಯ ಚಾರ್ಟರ್ಡ್ ಅಕೌಂಟೆಂಟ್ಸ್ ದಿನಾಚರಣೆಯನ್ನು ಆಚರಿಸಲಾಯಿತು. ಚಾರ್ಟರ್ಡ್ ಅಕೌಂಟೆಂಟ್ ಕೆ.ಎಸ್. ಚೆಟ್ಟಿ , ಕಿರಣ ಶಾವಿ, ಆನಂದ ಪೋತ್ನಿಸ್ ಅವರನ್ನು ಗೌರವ ಪೂರ್ವಕವಾಗಿ ಸನ್ಮಾಸಲಾಯಿತು.

ಈ ಸಂದರ್ಭದಲ್ಲಿ ಕೆ.ಎಸ್. ಚೆಟ್ಟಿ ಮಾತನಾಡಿ, ರಾಷ್ಟ್ರೀಯ ಚಾರ್ಟರ್ಡ್ ಅಕೌಂಟೆಂಟ್ ದಿನವನ್ನು ಪ್ರತಿ ವರ್ಷ ಜುಲೈ 1ರಂದು ಆಚರಿಸಲಾಗುತ್ತದೆ. ಭಾರತವು ಇನ್ಸ್ಟಿಟ್ಯೂಟ್ ಆಫ್ ಚಾರ್ಟರ್ಡ್ ಅಕೌಂಟೆಂಟ್ಸ್ ಆಫ್ ಇಂಡಿಯಾ (ಐಸಿಎಐ) ಸ್ಥಾಪನೆಯ ಗುರುತಾಗಿ ಈ ದಿನವನ್ನು ಆಚರಿಸಲಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ರೋಟರಿ ಸೆಂಟ್ರಲ್‌ನ 2025–26ನೇ ಸಾಲಿನ ನೂತನ ಅಧ್ಯಕ್ಷ ಚೇತನ ಅಂಗಡಿ, ಕಾರ್ಯದರ್ಶಿ ರಾಜು ಉಮನಾಬಾದಿ, ಖಜಾಂಚಿ ಡಾ. ಪ್ರಭು ಗಂಜಿಹಾಳ, ಮಾಜಿ ಅಸಿಸ್ಟಂಟ್ ಗವರ್ನರ್ ಮಲ್ಲಿಕಾರ್ಜುನ ಐಲಿ, 3170ದ ನೂತನ ಅಸಿಸ್ಟಂಟ್ ಗವರ್ನರ್ ವಿ.ಕೆ. ಗುರುಮಠ, ರಾಜು ಕುರಡಗಿ, ಎಸ್.ಆಯ್. ಅಣ್ಣಿಗೇರಿ, ಚಂದ್ರಗೌಡ ಹಿರೇಗೌಡರ, ಶ್ರೀಕಾಂತ ಲಕ್ಕುಂಡಿ, ಪರಶುರಾಮ ನಾಯ್ಕರ್, ಮಲ್ಲಿಕಾರ್ಜುನ ಚಂದಪ್ಪನವರ ಮೊದಲಾದ ಸದಸ್ಯರು ಪಾಲ್ಗೊಂಡಿದ್ದರು.

## ಹೃದಯ ಸಂಬಂಧಿ ಕಾಯಿಲೆಗಳಿಗೆ ವರವಾಗುತ್ತಿರುವ ಡಾ. ಪುನೀತರಾಜ್‌ಕುಮಾರ 'ಹೃದಯ ಜ್ಯೋತಿ'

# ತಾಲೂಕಾ ಆಸ್ಪತ್ರೆಗಳಲ್ಲಿ ಉಚಿತ ಇಸಿಜಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ರಾಜ್ಯದ ಯುವಸಮೂಹಕ್ಕೆ ಮಾದರಿಯಾಗಿದ್ದ ನಟ ಪುನೀತರಾಜಕುಮಾರ ಅವರ ಹೆಸರಿನಲ್ಲಿ ರಾಜ್ಯ ಸರಕಾರ ಜಾರಿಗೊಳಿಸಿರುವ ಡಾ. ಪುನೀತ್ ರಾಜ್‌ಕುಮಾರ ಹೃದಯ ಜ್ಯೋತಿ ಯೋಜನೆ ಹೃದಯ ಸಂಬಂಧಿ ಕಾಯಿಲೆಗಳಿಂದ ಬಳಲುತ್ತಿರುವ ರೋಗಿಗಳಿಗೆ ವರವಾಗುತ್ತಿದೆ.


ಜಿಲ್ಲೆಯ ಶಿರಹಟ್ಟಿ ಮತ್ತು ನರಗುಂದ ತಾಲೂಕಾ ಆಸ್ಪತ್ರೆಗಳಲ್ಲಿ ಹೃದಯ ಸಂಬಂಧಿ ಕಾಯಿಲೆಗಳಿಗೆ ಉಚಿತವಾಗಿ ಇಸಿಜಿ ಮಾಡುವ ವ್ಯವಸ್ಥೆ ಜಾರಿಯಲ್ಲಿದ್ದು, ಇಸಿಜಿ ಮಾಡಿದ ನಂತರ ಹೃದಯತಜ್ಞರ ಸಲಹೆ ಮೇರೆಗೆ ತುರ್ತಾಗಿ ಚಿಕಿತ್ಸೆ ಅವಶ್ಯವಿದ್ದವರಿಗೆ ಮೇಲ್ಮಟ್ಟದ ಆಸ್ಪತ್ರೆಗೆ ಕಳುಹಿಸಲಾಗುತ್ತಿದೆ. ಜಿಲ್ಲೆಯಲ್ಲಿ ಈ ಯೋಜನೆಯಡಿ 2024ರ ಮಾರ್ಚ್‌ನಿಂದ ಜೂನ್–2025ರವರೆಗೆ ಒಟ್ಟು 6681 ಇಸಿಜಿ ಮಾಡಲಾಗಿದೆ. ಇದರಲ್ಲಿ 3491 ನಾರ್ಮಲ್ ಇದ್ದು, 48 ಹೃದಯ ಸಂಬಂಧಿ ಕಾಯಿಲೆ ಇದ್ದವರಿಗೆ ಹೆಚ್ಚಿನ ಚಿಕಿತ್ಸೆ ನೀಡಿ 35 ಜನರ ಜೀವವನ್ನು ಉಳಿಸಲಾಗಿದೆ. ಕಳೆದ 3 ತಿಂಗಳಲ್ಲಿ ಕಾರ್ಡಿಯಾಕ್‌ನಿಂದ 78 ಜನರು ಮೃತಪಟ್ಟಿದ್ದು, ಶಿರಹಟ್ಟಿ ತಾಲೂಕಿನಲ್ಲಿ 4 ಮತ್ತು ಲಕ್ಷ್ಮೇಶ್ವರ ತಾಲೂಕಿನಲ್ಲಿ 2 ಹೃದಯಾಘಾತದಿಂದ ಸಾವನ್ನಪ್ಪಿರುವುದಾಗಿ ಆರೋಗ್ಯ ಇಲಾಖೆಯ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಹೆಚ್ಚುತ್ತಿರುವ ಹೃದಯಾಘಾತಕ್ಕೆ ಮತ್ತು ಹೃದಯ ಸಂಬಂಧಿತ ಕಾಯಿಲೆಗಳಿಗೆ ಆಧುನಿಕ ಜೀವನಶೈಲಿಯೇ ಪ್ರಮುಖ ಕಾರಣವಾಗಿದೆ ಎಂದು ಹೃದಯತಜ್ಞರ ಅಭಿಪ್ರಾಯವಾಗಿದೆ. ಅಲ್ಲದೆ, ಪರಿಸರ ಮಾಲಿನ್ಯದಿಂದ ಕಲುಷಿತ ಆಹಾರ, ವಂಶವಾಹಿ, ಅತಿಯಾದ ಧೂಮಪಾನ–ಮದ್ಯಪಾನ ಸಹ ಹೃದಯಾಘಾತಕ್ಕೆ ಪ್ರಮುಖ ಕಾರಣವಾಗುತ್ತಿವೆ.

ಜಿಲ್ಲೆಯಲ್ಲಿಯ ಹೃದಯ ಸಂಬಂಧಿ ಕಾಯಲೆಗಳಿಂದ ಬಳಲುತ್ತಿರುವವರು ದೂರದ ಬೆಂಗಳೂರು–ಬೆಳಗಾಂವಗಳ ಪ್ರತಿಷ್ಠಿತ ಆಸ್ಪತ್ರೆಗಳಿಗೆ ತೆರಳಬೇಕಿತ್ತು. ಇತ್ತೀಚೆಗೆ ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ ಅವರ ಇಚ್ಛಾಶಕ್ತಿಯ ಪರಿಣಾಮ ಗದಗ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಆರಂಭವಾಗಿರುವ ಕ್ಯಾಥ್‌ಲ್ಯಾಬ್ ಹೃದಯ ರೋಗದಿಂದ ಬಳಲುತ್ತಿರುವ ಬಡ ಜನತೆಯ ಪಾಲಿಗೆ ವರವಾಗಿದೆ.

ತಾಲೂಕಾ ಆರೋಗ್ಯಾಧಿಕಾರಿ ಡಾ. ಸುಭಾಸ ದೈಗೊಂಡ ಪ್ರತಿಕ್ರಿಯಿಸಿ, ಗ್ರಾಮೀಣ ಭಾಗದಲ್ಲಿ ಬಿಎಚ್‌ಓಗಳ ಮೂಲಕ ಹೃದಯ ಸಂಬಂಧಿತ ಕಾಯಿಲೆಗಳ ಕುರಿತು ಮುನ್ನೆಚ್ಚರಿಕೆ ವಹಿಸುವಂತೆ ಜಾಗೃತಿ ಮೂಡಿಸಲಾಗುತ್ತಿದೆ. ಆಧುನಿಕ ಆಹಾರ ಪದ್ಧತಿ, ಕೆಲಸದ ಒತ್ತಡ, ಧೂಮಪಾನ–ಮದ್ಯಪಾನದಿಂದ ದೂರವಿರಬೇಕು. ವರ್ಷಕ್ಕೆ 1 ಬಾರಿಯಾದರೂ ಹೃದಯ ಪರೀಕ್ಷೆ ಮಾಡಿಸಬೇಕೆಂದು ಹೇಳಿದರು.

ಈ ಕುರಿತು ಪ್ರತಿಕ್ರಿಯಿಸಿದ ಪ.ಪಂ ಸದಸ್ಯ ಮಂಜುನಾಥ ಘಂಟಿ, ಯುವಪೀಳಿಗೆ ಆರೋಗ್ಯದ ಬಗ್ಗೆ ಹೆಚ್ಚಿನ ಗಮನ ಹರಿಸುತ್ತಿಲ್ಲ. ಇದರಿಂದ ಅಲ್ಲಲ್ಲಿ ಹೃದಯಾಘಾತದಿಂದ ಸಾವನ್ನಪ್ಪುತ್ತಿರುವುದು ಕೇಳಿ ಬರುತ್ತಿದ್ದು, ಜಂಕ್ ಫುಡ್ ಸೇವಿಸುವುದನ್ನು ಬಿಡಬೇಕು. ಹೃದಯ ಸಂಬಂಧಿ ಆರೋಗ್ಯದ ಕುರಿತು ಇಲಾಖೆಯು ಇನ್ನೂ ಹೆಚ್ಚಿನ ರೀತಿಯಲ್ಲಿ ಜನತೆಗೆ ಈ ಬಗ್ಗೆ ಜಾಗೃತಿ ಮೂಡಿಸಬೇಕೆಂದು ಹೇಳಿದರು.




ಈ ಕುರಿತು ಪ್ರತಿಕ್ರಿಯಿಸಿದ ಜಿಲ್ಲಾ ಆರೋಗ್ಯ ಇಲಾಖೆಯ ಸಮೀಕ್ಷಣಾಧಿಕಾರಿ ಹಾಗೂ ಸ್ಟೆಮಿ ಜಿಲ್ಲಾ ನೋಡಲ್ ಅಧಿಕಾರಿ ಡಾ. ವೆಂಕಟೇಶ ರಾಠೋಡ, ಜಿಲ್ಲೆಯ ಉಪ ಕೇಂದ್ರಗಳ ಮಟ್ಟದಲ್ಲಿ ರಕ್ತದೊತ್ತಡ ಮತ್ತು ಮಧುಮೇಹ, ಬಾಯಿ, ಸ್ತನ, ಸರ್ವಿಕಲ್ ಕ್ಯಾನ್ಸರ್‌ಗಳ ಕುರಿತು ಸ್ಕ್ರೀನಿಂಗ್ ಮಾಡಲಾಗುತ್ತಿದೆ. ಜಿಲ್ಲೆಯ ಶಿರಹಟ್ಟಿ–ನರಗುಂದ ತಾಲೂಕಾ ಆಸ್ಪತ್ರೆಗಳಲ್ಲಿ ಹೃದಯ ಜ್ಯೋತಿ ಕಾರ್ಯಕ್ರಮದಡಿ ಹೃದಯ ಸಂಬಂಧಿ ಕಾಯಿಲೆ ಇದ್ದವರಿಗೆ ತಪಾಸಣೆ ನಡೆಸಿ ಅಗತ್ಯವಿದ್ದವರಿಗೆ ಹೆಚ್ಚಿನ ಚಿಕಿತ್ಸೆ ನೀಡಲಾಗುತ್ತಿದೆ. ಸಾರ್ವಜನಿಕರು ಆಧುನಿಕ ಜೀವನಶೈಲಿಯಿಂದ ದೂರವಿದ್ದು, ಆರೋಗ್ಯವನ್ನು ಕಾಪಾಡಿಕೊಳ್ಳುವ ಅಗತ್ಯವಿದೆ ಎಂದರು.

## ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನದಲ್ಲಿ ಅಡ್ನೂರ ಶ್ರೀಗಳ ಅಭಿಮತ

# ಯುವಕರೂ ಆಧ್ಯಾತ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಯುವಕರನ್ನು ಆಧ್ಯಾತ್ಮಿಕ ಹಾಗೂ ಧಾರ್ಮಿಕ ಕಾರ್ಯಗಳಲ್ಲಿ ತೊಡಗಿಸುವ ಮೂಲಕ ಅವರನ್ನು ಧರ್ಮದ ಸನ್ಮಾರ್ಗದಲ್ಲಿ ಮುನ್ನಡೆಯುವಂತೆ ಸನ್ನದ್ಧಗೊಳಿಸುವದು ಎಂದಿಗಿಂತ ಇಂದು ಅವಶ್ಯವಿದೆ ಎಂದು ಅಡ್ನೂರ ರಾಜೂರ ಗದಗ ಬೃಹನ್ಮಠದ ಪೂಜ್ಯ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮಿಗಳು ಹೇಳಿದರು.

ಅವರು ಗುರುವಾರ ನಗರದ ಗಾಣಿಗ ಭವನದಲ್ಲಿ ಗದಗ–ಬೆಟಗೇರಿ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಸಮಿತಿ ಶ್ರೀಮದ್ ಕಾಶೀ ನೂತನ ಜಗದ್ಗುರುಗಳವರ ಆಷಾಢ ಮಾಸದ ಇಷ್ಟಲಿಂಗ ಮಹಾಪೂಜೆ ಹಾಗೂ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮದ ನೇತೃತ್ವ ವಹಿಸಿ ಮಾತನಾಡಿದರು.

ಯುವಕರೂ ಸಹ ಇಂತಹ ಇಷ್ಟಲಿಂಗ ಮಹಾಪೂಜೆ, ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕು. ಅಂದಾಗ ಅವರಲ್ಲಿ ಧರ್ಮ ಸಂಸ್ಕಾರ, ಆಧ್ಯಾತ್ಮಿಕ ಸಂಸ್ಕೃತಿ ತಿಳಿಯುವದು. ಆ ಮೂಲಕ ಅವರಲ್ಲಿ ಸದ್ಗುಣಗಳು ಬಂದು ಅವರು ಜೀವನದಲ್ಲಿ ಸತ್ಪ್ರಜೆಗಳಾಗಿ ಬಾಳಲು ಪೂರಕವಾಗುವದು ಎಂದರು.



ನರೇಗಲ್ ಹಿರೇಮಠದ ಪೂಜ್ಯ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಶ್ರೀ ಸಿದ್ಧಾಂತ ಶಿಖಾಮಣಿ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿ, ಭಯ ದುರ್ಗುಣಗಳ ಸೇನಾಧಿಪತಿಯಾಗಿದ್ದು, ಸತ್ಯ ಮತ್ತು ಪ್ರಾಮಾಣಿಕತೆಯಿಂದ ಜೀವನ ಮಾಡುವವರು ಯಾವುದಕ್ಕೂ ಭಯಪಡುವ ಅಗತ್ಯವಿಲ್ಲ. ಸತ್ಯ ಪರಿಪಾಲನೆಯ ಅಗತ್ಯವಿದೆ. ಸತ್ಯದಿಂದ ನಡೆಯುವದೂ ಸಹ ಒಂದು ತಪಸ್ಸು ಇದ್ದಂತೆ ಎಂದರು.

ಸಾನ್ನಿಧ್ಯ ವಹಿಸಿ ಮಾತನಾಡಿದ ಜಂಗಮವಾಡಿಮಠ ವಾರಣಾಸಿ ಕಾಶೀ ಮಹಾಪೀಠದ ಜ. ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದಂಗಳವರು, ಸತ್ಯ, ನಿಷ್ಠೆ, ಪ್ರಾಮಾಣಿಕತೆಯುಳ್ಳವರು ಜೀವನದಲ್ಲಿ ಯಶಸ್ಸನ್ನು ಸಾಧಿಸಬಲ್ಲರು. ಇವರಿಗೆ ಸಮಾಜದಲ್ಲಿ ಗೌರವ ಇದೆ ಎಂದರು.

ವಿಜ್ಞಾನ ಮತ್ತು ತಂತ್ರಜ್ಞಾನವನ್ನು ಜ್ಞಾನಾರ್ಜನೆಗೆ ಹಾಗೂ ಸತ್ಕಾರ್ಯಗಳಿಗೆ ಸದುಪಯೋಗ ಮಾಡಿಕೊಳ್ಳಬೇಕು. ಇಂದು ಮೊಬೈಲ್ ಬಂದು ಸುಳ್ಳು ಹೇಳುವದನ್ನು ಇನ್ನಷ್ಟು ಸುಗಮಗೊಳಿಸಿದೆ. ಆದರೆ ಸುಳ್ಳು ಸದಾವಕಾಲ ಫಲಿಸದು, ಅದರಿಂದ ಹಾನಿಯೇ ಹೆಚ್ಚು. ಆದ್ದರಿಂದ ಮನೆಯಲ್ಲಿ ಹಿರಿಯರು ಸತ್ಯವನ್ನು ಮಾತನಾಡುವ ಮೂಲಕ ಮಕ್ಕಳಿಗೂ ಅಂತಹ ಸಂಸ್ಕಾರವನ್ನು ರೂಢಿಸಬೇಕು ಎಂದರು.

ಭಕ್ತಿ ಸೇವೆ ವಹಿಸಿಕೊಂಡಿದ್ದ ಪ್ರಭುಸ್ವಾಮಿ ದಂಡಾವತಿಮಠ, ಸಿದ್ಧರಾಮೇಶ್ವರ ಬಾರಕೇರ, ಕೆ.ಎಸ್. ಕೋರಿಮಠ, ಶರಣಪ್ಪ ಕುರಡಗಿ, ಮಲ್ಲಿಕಾರ್ಜುನ ಸುರಕೋಡ, ಶಿವಯೋಗಿ ತೆಗ್ಗಿನಮಠ, ಪ್ರಶಾಂತ ತಂಬ್ರಳ್ಳಿಮಠ, ಚನ್ನಬಸವರಾಜ ಹಿರೇಮಠ, ಪ್ರವೀಣ ಚನ್ನಳ್ಳಿಮಠ, ಫಕ್ಕೀರಯ್ಯಶಾಸ್ತ್ರಿ ಹಿರೇಮಠ, ರೋಹಿತ ಅಬ್ಬಿಗೇರಿ, ಆಂಜನೇಯ ಕಟಗಿ, ರಾಜಶೇಖರ ಮುಧೋಳ ದಂಪತಿಗಳನ್ನು ಪೂಜ್ಯರು ಸನ್ಮಾನಿಸಿ ಗೌರವಿಸಿದರು. ಮಂಗಳಾ ಯಾನಮಶೆಟ್ಟಿ ಪ್ರಾರ್ಥಿಸಿದರು. ಗದಗ ಜಿಲ್ಲಾ ವೀರಶೈವ ಮಹಾಸಭಾದ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಸ್ವಾಗತಿಸಿದರು. ಸಮಿತಿಯ ಕಾರ್ಯಾಧ್ಯಕ್ಷ ವ್ಹಿ.ಕೆ. ಗುರುಮಠ ನಿರೂಪಿಸಿ ವಂದಿಸಿದರು.

# ರಾಷ್ಟ್ರೀಯ ವೈದ್ಯರ ದಿನ ಆಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಗದಗ ಸೆಂಟ್ರಲ್ ವತಿಯಿಂದ ರಾಷ್ಟ್ರೀಯ ವೈದ್ಯರ ದಿನಾಚರಣೆಯನ್ನು ಆಚರಿಸಲಾಯಿತು. ನಗರದ ವೈದ್ಯರಾದ ಡಾ. ಸಿ.ಬಿ. ಹಿರೇಗೌಡರ, ಡಾ. ವಿ.ಸಿ. ಶಿರೋಳ, ಡಾ. ಶಿಲ್ಪಾ ಪವಾಡಶೆಟ್ಟರ, ಡಾ. ಪ್ರಕಾಶ ರಕ್ಕಸಗಿ, ಡಾ. ಮಧುಸೂದನ ಚಿಂತಾಮಣಿ, ಡಾ. ಕುಮಾರ ಕಂಠಿಮಠ ಅವರನ್ನು ಈ ಸಂದರ್ಭದಲ್ಲಿ ಸನ್ಮಾಸಲಾಯಿತು.

ಡಾ. ಸಿ.ಬಿ. ಹಿರೇಗೌಡರ ಮಾತನಾಡಿ, ರೋಟರಿ ಸೆಂಟ್ರಲ್ ಸಂಸ್ಥೆ ವೈದ್ಯರ ದಿನಾಚರಣೆಯ ನಿಮಿತ್ತ ವೈದ್ಯರ ಮನೆಗೆ, ಅವರಿರುವ ಆಸ್ಪತ್ರೆಗಳಿಗೆ ಹೋಗಿ ಸನ್ಮಾನಿಸುತ್ತಿರುವದು ಶ್ಲಾಘನೀಯ. ಪಶ್ಚಿಮ ಬಂಗಾಳದ ಎರಡನೇ ಮುಖ್ಯಮಂತ್ರಿ ಡಾ. ಬಿಧನ್ ಚಂದ್ರ ರಾಯ್ ಅವರ ನೆನಪಿಗಾಗಿ ಭಾರತದಾದ್ಯಂತ ಜುಲೈ 1ರಂದು ರಾಷ್ಟ್ರೀಯ ವೈದ್ಯರ ದಿನ ಆಚರಿಸಲಾಗುತ್ತದೆ. ಸಮಾಜಕ್ಕೆ ವೈದ್ಯರ ಸೇವೆ ಅನುಪಮವಾದದ್ದು. ಎಲ್ಲ ಭಾಗ್ಯಗಳಲ್ಲಿ ಆರೋಗ್ಯ ಭಾಗ್ಯವೇ ದೊಡ್ಡದು. ಅನಾರೋಗ್ಯವನ್ನು ಕಳೆದು ಉತ್ತಮ ಆರೋಗ್ಯವನ್ನು ಸೃಷ್ಟಿಸಿ ಬದುಕಿಗೆ ಚೈತನ್ಯ ನೀಡುವ ವೈದ್ಯ ರೋಗಿಗಳ ಪಾಲಿಗೆ ದೇವರು ಎಂದರು. ಈ ಸಂದರ್ಭದಲ್ಲಿ ರೋಟರಿ ಸೆಂಟ್ರಲ್ ಗದಗನ 2025–26ನೇ ಸಾಲಿನ ನೂತನ ಅಧ್ಯಕ್ಷ ಚೇತನ ಅಂಗಡಿ, ಕಾರ್ಯದರ್ಶಿ ರಾಜು ಉಮನಾಬಾದಿ, ಖಜಾಂಚಿ ಡಾ. ಪ್ರಭು ಗಂಜಿಹಾಳ, ಮಾಜಿ ಅಸಿಸ್ಟಂಟ್ ಗವರ್ನರ್ ಮಲ್ಲಿಕಾರ್ಜುನ ಐಲಿ, 3170ದ ನೂತನ ಅಸಿಸ್ಟಂಟ್ ಗವರ್ನರ್ ವಿ.ಕೆ. ಗುರುಮಠ, ಚಂದ್ರಗೌಡ ಹಿರೇಗೌಡರ, ಎಸ್.ಆಯ್. ಅಣ್ಣಿಗೇರಿ, ಶ್ರೀಕಾಂತ ಲಕ್ಕುಂಡಿ, ರಾಜು ಕುರಡಗಿ, ಮಲ್ಲಿಕಾರ್ಜುನ ಚಂದಪ್ಪನವರ, ಪರಶುರಾಮ ನಾಯ್ಕರ್ ಮೊದಲಾದ ಸದಸ್ಯರು ಪಾಲ್ಗೊಂಡಿದ್ದರು.



# ಸಾಲಗಾರರ ಕಿರುಕುಳ; ವ್ಯಕ್ತಿ ಆತ್ಮಹತ್ಯೆ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಬಡ್ಡಿ ಸಾಲಗಾರರ ಕಿರುಕುಳ ತಾಳಲಾರದೆ ವ್ಯಕ್ತಿಯೊಬ್ಬ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡ ಘಟನೆ ಪಟ್ಟಣದ ಹೊರವಲಯದ ಜಮೀನಿನಲ್ಲಿ ಗುರುವಾರ ನಡೆದಿದೆ. ಕುರುಬರಗೇರಿಯ ಲೋಕೇಶ ಪತ್ರಿ (38) ಆತ್ಮಹತ್ಯೆಗೆ ಶರಣಾದ ವ್ಯಕ್ತಿ. ಈ ಕುರಿತು ಮೃತನ ಸಹೋದರ ಗೋಣೆಪ್ಪ ಎಂಬಾತ ಸ್ಥಳೀಯ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಮೃತ ಲೋಕೇಶ ಪತ್ರಿ ಕೂಲಿ ಕೆಲಸಗಾರನಾಗಿದ್ದು, ಕುಟುಂಬ ನಿರ್ವಹಣೆಗಾಗಿ ಬೇರೆಯವರ ಬಳಿ ಶೇ.10ರ ಬಡ್ಡಿ ದರದಂತೆ ಸಾಲ ಮಾಡಿದ್ದ.

ಕಳೆದ ಆರೇಳು ದಿನಗಳ ಹಿಂದೆ ಆರೋಪಿತರಾದ ಮ್ಯಾಕಿ ದುರುಗಪ್ಪ, ಕೋಳಿ ಅಂಗಡಿ ಚೌಡಪ್ಪ, ಗುಡೆಕಟ್ಟಿಕೆರೆ ದೊಡ್ಡಮನಿ ದುರುಗಪ್ಪ ಅಲಿಯಾಸ್ ಗಿಡ್ಡ ದುರುಗ ಎಂಬುವವರು ದೂರದಾರನ ಮನೆ ಪಕ್ಕದಲ್ಲಿರುವ ಮೃತ ಲೋಕೇಶನ ಮನೆ ಬಳಿ ಬಂದು ಅವಾಚ್ಯವಾಗಿ ಬೈದಾಡುತ್ತಾ ಬಡ್ಡಿ ಕೊಡಬೇಕು, ಇಲ್ಲದಿದ್ದರೆ ನಿನ್ನನ್ನು ಉಳಿಸುವುದಿಲ್ಲ ಎಂದು ಬೆದರಿಕೆ ಹಾಕಿದ್ದರು. ಇದರಿಂದ ಲೋಕೇಶ ಪತ್ರಿ ಭಯಭೀತನಾಗಿದ್ದ. ಈ ಎಲ್ಲಾ ಬೆಳವಣಿಗೆಗಳಿಂದ ಗುರುವಾರ ಲೋಕೇಶ ಪತ್ರಿ ಮನೆಯಿಂದ ತಾನು ಕೋರಿಯಂತೆ ಉಳುಮೆ ಮಾಡಿರುವ ಜಮೀನಿಗೆ ತೆರಳಿ ತನ್ನ ಮೊಬೈಲ್‌ನಲ್ಲಿ ವಿಡಿಯೋ ಮಾಡಿದ್ದು, ತನಗೆ ಸಾಲ ಕೊಟ್ಟಿದ್ದ ಮೂವರು ಆರೋಪಿಗಳ ಹೆಸರುಗಳನ್ನು ಹೇಳಿ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

ಪಟ್ಟಣದ ಪೊಲೀಸ್ ಠಾಣೆಯ ಪಿಎಸ್‌ಐ ಶಂಭುಲಿಂಗ ಎಸ್.ಹಿರೇಮಠ ಪ್ರಕರಣ ದಾಖಲಿಸಿಕೊಂಡು ಆರೋಪಿತರಾದ ಮ್ಯಾಕಿ ದುರುಗಪ್ಪ, ಕೋಳಿ ಅಂಗಡಿ ಚೌಡಪ್ಪ, ಗುಡೆಕಟ್ಟಿಕೆರೆ ದೊಡ್ಡಮನಿ ದುರುಗಪ್ಪ ಅಲಿಯಾಸ್ ಗಿಡ್ಡ ದುರುಗ ಅವರುಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

# ಪಡಿತರ ಅಕ್ಕಿ ಅಕ್ರಮ ಸಂಗ್ರಹ, ಮಾರಾಟ ತಡೆಗಟ್ಟಲು ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದಲ್ಲಿ ಪಡಿತರ ಅಕ್ಕಿ ಅಕ್ರಮ ಸಂಗ್ರಹ ಮತ್ತು ಮಾರಾಟ ತಡೆಗಟ್ಟುವ ಕುರಿತು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ವತಿಯಿಂದ ತಹಸೀಲ್ದಾರರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕರವೇ ಸ್ವಾಭಿಮಾನಿ ಸೇನೆಯ ತಾಲೂಕಾಧ್ಯಕ್ಷ ಇಸ್ಮಾಯಿಲ್ ಉಮಚಗಿ ಮಾತನಾಡಿ, ಅಕ್ರಮ ಪಡಿತರ ಅಕ್ಕಿ ಸಂಗ್ರಹ ಹಾಗೂ ಸಾಗಾಟ ನಿರಂತರ ನಡೆಯುತ್ತಿದ್ದು, ಅವಳಿ ನಗರದಲ್ಲಿ ಕಾಳಸಂತೆಯಲ್ಲಿ ಹೆಚ್ಚಿನ ದರಕ್ಕೆ ಮಾರಾಟವಾಗುತ್ತಿದೆ. ಅಕ್ರಮ ಅಕ್ಕಿ ಸಾಗಾಟ ತಡೆಯಬೇಕಾದ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಕಣ್ಣುಮುಚ್ಚಿ ಕುಳಿತಿದ್ದಾರೆ ಮತ್ತು ಅಕ್ರಮ ಪಡಿತರ ಅಕ್ಕಿ ಸಾಗಾಟಗಾರ ಜೊತೆಗೆ ಕೈಜೋಡಿಸಿದ್ದಾರೆ.

ಈ ಅಕ್ರಮ ಪಡಿತರ ಅಕ್ಕಿ ಸಂಗ್ರಹ ಹಾಗೂ ಸಾಗಾಟಕ್ಕೆ ಕಡಿವಾಣ ಹಾಕಿ ತಪ್ಪಿತಸ್ಥರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಬಡವರ ಹೊಟ್ಟೆ ತುಂಬಿಸುವ ಯೋಜನೆಯ ಉದ್ದೇಶ ಸಾಕಾರವಾಗಬೇಕು ಎಂದರು. ಈ ಸಂದರ್ಭದಲ್ಲಿ ಖಾಜಾಸಾಬ ಕೊಪ್ಪಳ, ಅಸ್ಲಮ್ ಮಾಲದಾರ, ಸಾಧಿಕ ಚಿತವಾಡಗಿ, ಅನ್ವರ ಕೊಪ್ಪಳ, ಸಲೀಂ ಶಹಪೂರ, ಫಾರುಕ ದಂಡಿನ, ಸತೀಶ ರೋಣ, ಹೈದರಲಿ ಸವಣೂರ, ಮಹಮ್ಮದ ಅಲಿ, ಶಬೀರ ದ್ಯಾಪೂರ, ಹಮಾಯತ್, ಆಸಿಫ್ ಮಾಲದಾರ, ನೌವೀದ ಕಂಪ್ಲಿ, ರಸೂಲ ಬೇಪಾರಿ ಸೋಯಲ್ ಸೇರಿದಂತೆ ಕಾರ್ಯಕರ್ತರು ಉಪಸ್ಥಿತರಿದ್ದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ನಿರಾಶ್ರಿತ ಮಾನಸಿಕ ಅಸ್ವಸ್ಥರ ಆರೈಕೆಗೆ ಕರ್ನಾಟಕ ಸರ್ಕಾರವು ಸರ್ಕಾರೇತರ ಸಂಸ್ಥೆಗಳ ಸಹಯೋಗದೊಂದಿಗೆ ಎಲ್ಲ ಜಿಲ್ಲೆಗಳಲ್ಲಿ ಎಮರ್ಜೆನ್ಸಿ ಕೇರ್ ಮತ್ತು ರಿಕವರಿ ಸೆಂಟರ್ ಗಳನ್ನು ಜಿಲ್ಲಾ ಮಟ್ಟದ ಆಸ್ಪತ್ರೆಗಳಲ್ಲಿ ಸ್ಥಾಪಿಸಲು ನಿರ್ಧರಿಸಿದೆ. ಗದಗ ಜಿಲ್ಲೆಯಲ್ಲಿಯ ಎಮರ್ಜೆನ್ಸಿ ಕೇರ್ ಮತ್ತು ರಿಕವರಿ ಸೆಂಟರ್‌ನ್ನು ಸ್ಥಾಪಿಸಲು ಸರ್ಕಾರೇತರ ಸಂಸ್ಥೆಗಳಿಂದ ಎಕ್ಸಪ್ರೆಶನ್ ಆಫ್ ಇಂಟರೆಸ್ಟ್ ( ಇ ಓ ಐ ) ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು www.kppp.karnataka.gov.in ವೆಬ್‌ಸೈಟ್ ಸಂಪರ್ಕಿಸಬಹುದಾಗಿದೆ. ಅರ್ಜಿಯನ್ನು ಜುಲೈ 12 ರ ಸಂಜೆ 4 ಗಂಟೆಯೊಳಗೆ ಅಗತ್ಯ ಮಾಹಿತಿಯೊಂದಿಗೆ ಅಪ್ ಲೋಡ್ ಮಾಡತಕ್ಕದ್ದು ಹಾಗೂ ಅರ್ಜಿದಾರರು ಅಧಿಸೂಚನೆಯಲ್ಲಿ ತಿಳಿಸಿರುವಂತೆ ಜುಲೈ 15 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯಲ್ಲಿ ಮೂಲ ದಾಖಲೆಗಳೊಂದಿಗೆ ಪರಿಶೀಲನೆಗಾಗಿ ಖುದ್ದಾಗಿ ಹಾಜರಾಗತಕ್ಕದ್ದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿಮಗೆ ಆತ್ಮಸಾಕ್ಷಿ ಇದ್ದರೆ ಸಾರ್ವಜನಿಕವಾಗಿ ಕ್ಷಮೆ ಕೇಳಿ

▶▶ಮೊದಲನೇ ಪುಟದಿಂದ

ಆರ್ಥಿಕವಾಗಿ ಅನುಕೂಲತೆಯಿಂದ ನಡೆದಿದ್ದೇವೆ. ಬಿಜೆಪಿಯವರಿಗೆ ಅಸೂಯೆಯಾಗಿದೆ. ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಬಡವ ಬಲ್ಲಿದರ ಬಡತನದ ಬೇರನ್ನು ಕಿತ್ತು ಹಾಕುತ್ತಿದ್ದೇವೆ. ಬಡವರನ್ನು ಜಿರೋ ಪರ್ಸೆಂಟ್ ಮಾಡಲು ಸಾಧ್ಯವಾಗಿದೆ. ರಾಜ್ಯದಲ್ಲಿ ಸುಮಾರು 98.5 % ಜನರಿಗೆ ನಮ್ಮ ಯೋಜನೆಗಳ ಪ್ರತಿಫಲ ಮುಟ್ಟಿದೆ ಸಚಿವ ಎಂದು ಎಚ್ ಕೆ ಪಾಟೀಲ್ ಹೇಳಿದರು.

**ಬಿಜೆಪಿ ಅವರದು ತಿರುಕನ ಕನಸು**

ರಾಜ್ಯದಲ್ಲಿ 2026ಕ್ಕೆ ಮಧ್ಯಂತರ ಚುನಾವಣೆ ನಡೆಯಲಿದೆ ಎಂಬ ಬಿಜೆಪಿ ನಾಯಕರ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಬಿಜೆಪಿಯವರು ತಿರುಕನ ಕನಸು ಕಾಣುತ್ತಿದ್ದಾರೆ. ಎಂದರು.

**ಸರ್ಕಾರದ ಬಹಳಷ್ಟು ಕೇಸ್ ಗಳಿಗೆ ಸೋಲು**

ಇನ್ನೂ ನ್ಯಾಯಾಲಯದಲ್ಲಿರುವ ಪ್ರಕರಣಗಳ ಬಗ್ಗೆ ಸರ್ಕಾರದ ಪರವಾಗಿ ಸಮರ್ಥ ವಾದ ನಡೆಯುತ್ತಿಲ್ಲ ಎಂಬ ವಿಚಾರವಾಗಿ ಮಾತನಾಡಿ, ಈ ಬಗ್ಗೆ ಸಿಎಂ ಹಾಗೂ ಅಡಿಷನಲ್ ಅಡ್ವೋಕೇಟ್ ಜನರಲ್ ಚರ್ಚೆ ಮಾಡ್ತಿದ್ದಿವಿ. ಈ ಬಗ್ಗೆ ಗಂಭೀರವಾಗಿ ಪರಿಗಣನೆ ಮಾಡಿದ್ದೇವೆ. ಸರ್ಕಾರದ ಬಹಳಷ್ಟು ಕೇಸ್ ಗಳು ಸೋಲು ಆಗ್ತಿದೆ ಎಂಬ ಅಂಶಗಳು ಬಂದಿದೆ. ಖಂಡಿತವಾಗಿ ಈ ಬಗ್ಗೆ ಒಂದು ನಿರ್ಧಾರ ತಗೊಳ್ತೀವಿ ಎಂದರು.

# ವಿಕಲಚೇತನರಿಂದ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿನಲ್ಲಿ ಗದಗ ಜಿಲ್ಲೆಯಲ್ಲಿ ಪ್ರೀ ಮ್ಯಾಟ್ರಿಕ್ ಮತ್ತು ಪೋಸ್ಟ್ ಮ್ಯಾಟ್ರಿಕ್ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿಧ್ಯಾರ್ಥಿಗಳು ವಿದ್ಯಾರ್ಥಿ ವೇತನದ ಅರ್ಜಿಗಳನ್ನು ಸ್ಟೇಟ್ ಸ್ಕಾಲರ್‌ಶಿಪ್ ಪೋರ್ಟಲ್ Pre Metrichttps://ssp.post-matric.karnataka.gov.in/ssppre/ PostMetric https://ssp.postmatric.karnataka.gov.in/post_sa/signin.aspx ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಆಹ್ವಾನಿಸಲಾಗಿದೆ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ಅರ್ಜಿಯ ಒಂದು ಪ್ರತಿಯನ್ನು ತಮ್ಮ ವ್ಯಾಪ್ತಿಗೊಳಪಡುವ ಗ್ರಾ.ಪಂ ವಿ ಆರ್ ಡಬ್ಲ್ಯೂ, ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯತಿಯು ಆರ್ ಡಬ್ಲ್ಯೂ, ತಾ.ಪಂ. ಯು ಆರ್ ಡಬ್ಲ್ಯೂ, ಇವರಲ್ಲಿ ಅರ್ಜಿ ಸಲ್ಲಿಸಲು ಕೋರಿದೆ.

ಹೆಚ್ಚಿನ ಮಾಹಿತಿಗಾಗಿ ಖಾಜಾಹುಸೇನ. ಕಾತರಕಿ ಎಮ್ ಆರ್ ಡಬ್ಲ್ಯೂ ತಾಲೂಕು ಪಂಚಾಯತ್, ಗದಗ 8867556465, ಬಸವರಾಜ. ಓಲಿ. ಎಮ್ ಆರ್ ಡಬ್ಲ್ಯೂ ತಾಲೂಕು ಪಂಚಾಯತ್, ರೋಣ 9741615926, ಶಶಿಕಲಾ. ವಡ್ಡಟ್ಟಿ. ಎಮ್ ಆರ್ ಡಬ್ಲ್ಯೂ ತಾಲೂಕು ಪಂಚಾಯತ್, ಮುಂಡರಗಿ 9611922445, ಭಾರತಿ. ಮುರಶಿಳ್ಳಿ. ಎಮ್ ಆರ್ ಡಬ್ಲ್ಯೂ ತಾಲೂಕು ಪಂಚಾಯತ್, ಶಿರಹಟ್ಟಿ 8951128679, ಶಿವಾನಂದ ಹಾದಿಮನಿ ಎಮ್ ಆರ್ ಡಬ್ಲ್ಯೂ ತಾಲೂಕು ಪಂಚಾಯತ್, ನರಗುಂದ 9591679022 ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಗದಗ ಜಿಲ್ಲಾಡಳಿತ ಭವನ, ರೂಮ್ ನಂ:29 ರಲ್ಲಿನ ದೂರವಾಣಿ ಸಂಖ್ಯೆ 08372–220419 ಮೂಲಕ ಸಂಪರ್ಕಿಸಬಹುದು. ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಜುಮನ್ ಸಂಸ್ಥೆಯ ಚುನಾವಣೆಗೆ ವಿಳಂಬ: ಖಂಡನೆ

■ವಿಜಯಸಾಕ್ಷಿ ಸುದ್ದಿ, ಗದಗ



ಗದಗ–ಬೆಟಗೇರಿ ಅಂಜುಮನ್–ಎ–ಇಸ್ಲಾಂ ಸಂಸ್ಥೆಯ ಆಡಳಿತ ಮಂಡಳಿಗೆ ನಡೆಯಬೇಕಾಗಿರುವ ಚುನಾವಣೆ ಪ್ರಕ್ರಿಯೆಯನ್ನು ಅನವಶ್ಯಕವಾಗಿ ವಿಳಂಬಗೊಳಿಸಲಾಗುತ್ತಿದೆ. ಶಿಕ್ಷಣ ಮತ್ತು ಸಮುದಾಯ ಸೇವೆಯಲ್ಲಿ ಅಪಾರ ಸೇವೆ ಸಲ್ಲಿಸುತ್ತಿರುವ ಇಂತಹ ಮಹತ್ವದ ಸಂಸ್ಥೆಯ ಆಡಳಿತಾತ್ಮಕ ಶಿಷ್ಟಾಚಾರಗಳನ್ನು ಹಾಗೂ ಬದ್ಧತೆಯನ್ನು ದಿಕ್ಕು ತಪ್ಪಿಸುವಂತಹ ಪರಿಸ್ಥಿತಿ ನಿರ್ಮಾಣವಾಗುತ್ತಿರುವುದನ್ನು ಎಸ್‌ಡಿಪಿಐ ಗದಗ ಜಿಲ್ಲಾಧ್ಯಕ್ಷ ಬಿಲಾಲ ಗೋಕಾವಿ ತೀವ್ರವಾಗಿ ಖಂಡಿಸಿದ್ದಾರೆ. ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಯಾವುದೇ ಸ್ಥಳೀಯ ರಾಜಕೀಯ ವ್ಯಕ್ತಿಗಳ ಅಥವಾ ರಾಜಕಾರಣಿಗಳ ಬಾಹ್ಯ ಒತ್ತಡಗಳ ಅಡಿಯಲ್ಲಿ ನಿರ್ಧಾರಗಳನ್ನು ಕೈಗೊಳ್ಳದೆ, ಸಂಪೂರ್ಣ ನ್ಯಾಯಸಮ್ಮತ, ಪಾರದರ್ಶಕ ಮತ್ತು ಸಮಯಬದ್ಧವಾಗಿ ಚುನಾವಣೆ ಪ್ರಕ್ರಿಯೆಯನ್ನು ನಡೆಸಬೇಕು. ಸ್ಥಳೀಯ ಸಮುದಾಯದ ನಂಬಿಕೆ ಮತ್ತು ವಿಶ್ವಾಸ ಉಳಿಸಿಕೊಳ್ಳಬೇಕಾದದ್ದು ಸಂಬಂಧಿತ ಆಡಳಿತ ಮತ್ತು ಚುನಾವಣೆ ಅಧಿಕಾರಿಗಳ ನೈತಿಕ ಜವಾಬ್ದಾರಿಯಾಗಿದೆ. ಸಮುದಾಯದ ಭವಿಷ್ಯಕ್ಕೆ ರೂಪಕೊಡುವಂತಹ ಪಾರದರ್ಶಕ ಚುನಾವಣಾ ಪ್ರಕ್ರಿಯೆಗೆ ಶೀಘ್ರದಲ್ಲಿ ಚಾಲನೆ ನೀಡಬೇಕೆಂದು ಅವರು ಆಗ್ರಹಿಸಿದ್ದಾರೆ.

# MLC ರವಿಕುಮಾರ್‌ಗೆ ರಿಲೀಫ್: ಬಂಧನದಿಂದ ತಪ್ಪಿಸಿಕೊಂಡ ಬಿಜೆಪಿ ಮುಖಂಡ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ವಿರುದ್ಧ ಅಸಂಸದೀಯ ಪದ ಬಳಕೆ ಮಾಡಿದ ಆರೋಪದಡಿ ಒಐಅ ರವಿಕುಮಾರ್ ಗೆ ಹೈಕೋರ್ಟ್ ಬಿಗ್ ರಿಲೀಫ್ ಕೊಟ್ಟಿದೆ.

ಜೂನ್ 8ರ ವರೆಗೆ ಬಂಧಿಸದಂತೆ ಆದೇಶ ನೀಡಿರುವ ಕೋರ್ಟ್, ತನಿಖೆಗೆ ಸಹಕರಿಸುವಂತೆ ರವಿಕುಮಾರ್ ಅವರಿಗೆ ಸೂಚನೆ ನೀಡಿದೆ. ತಮ್ಮ ವಿರುದ್ಧ ದಾಖಲಾಗಿದ್ದ ಎಫ್‌ಐಆರ್ ರದ್ದು ಮಾಡುವಂತೆ ರವಿಕುಮಾರ್ ಸಲ್ಲಿಸಿದ್ದ ಅರ್ಜಿ ನ್ಯಾ.ಎಸ್.ಆರ್ ಕೃಷ್ಣಕುಮಾರ್ ಪೀಠದಲ್ಲಿ ವಿಚಾರಣೆ ನಡೆಯಿತು.

**ತಾಲೂಕಿನ ನರೇಗಾ ಕಾಮಗಾರಿಗಳ ಗುಣಮಟ್ಟ ಪರಿಶೀಲಿಸಿದ ಜಿ.ಪಂ ಸಿಇಒ ಭರತ್ ಎಸ್**

# ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ



ನರೇಗಾ ಕಾಮಗಾರಿಗಳ ಜೊತೆಗೆ ಭರತ್ ಎಸ್ ಅವರು ಸರ್ಕಾರಿ ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳೊಂದಿಗೆ ಶೈಕ್ಷಣೀಕ ಚಟುವಟಿಕೆಗಳ ಬಗ್ಗೆ ಸಂವಾದ ನಡೆಸಿದರು. ಕಾಲಕಾಲೇಶ್ವರ ಗ್ರಾಮದ ಮೊರಾರ್ಜಿ ದೇಸಾಯಿ ಮಾದರಿ ವಸತಿ ಶಾಲೆಯಲ್ಲಿ ವಿದ್ಯಾರ್ಥಿಗಳ ಜೊತೆ ಸಂವಾದದ ವೇಳೆ 9ನೇ ತರಗತಿಯಲ್ಲಿ ಶೇ.98 ಅಂಕ ಪಡೆದು ಸಾಧನೆ ಮಾಡಿದ ವಿದ್ಯಾರ್ಥಿನಿಯೊಬ್ಬಳು ಸಿಇಒ ಅವರ ಗಮನಸೆಳೆದಳು.

ಈ ವೇಳೆ ವಿದ್ಯಾರ್ಥಿಗೆ ಸಿಇಒ ಅವರು, 10ನೇ ತರಗತಿಯಲ್ಲಿ ಜಿಲ್ಲೆಗೆ ಪ್ರಥಮಳಾಗಿ ತೇರ್ಗಡೆ ಹೊಂದುವಂತೆ ಹರಸಿದರು.



**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ತಾಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳ ಗುಣಮಟ್ಟ ಪರಿಶೀಲಿಸಲು ಗುರುವಾರ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಗಜೇಂದ್ರಗಡ ತಾಲೂಕಿನ ನಿಡಗುಂದಿ ಮತ್ತು ಮಾರನಬಸರಿ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿದರು.

ನಿಡಗುಂದಿ ಗ್ರಾಮದ ಸೊಬಗಿನ ಅವರ ಹೊಲದಿಂದ ಕೆಂಪಯ್ಯನವರ ಹೊಲದವರೆಗೆ 2.20 ಲಕ್ಷ ರೂ ವೆಚ್ಚದಲ್ಲಿ ನಿರ್ಮಿಸಲಾದ ರಸ್ತೆ ಅಭಿವೃದ್ಧಿ ಕಾರ್ಯವನ್ನು ಪರಿಶೀಲಿಸಿದರು. ಈ ವೇಳೆ ರಸ್ತೆ ನಿರ್ಮಾಣದಲ್ಲಿ ಕ್ರಿಯಾಯೋಜನೆಯಂತೆ ರಸ್ತೆ ನಿರ್ಮಾಣ ಕಾರ್ಯ ನಡೆದಿದಿಯೇ ಎಂಬುದನ್ನು ಕಡತ ಪರಿಶೀಲಿಸಿ ತಿಳಿದುಕೊಂಡರು. ಬಳಿಕ ಗ್ರಾಮದ ಸಂಜೀವಿನಿ ವರ್ಕ್ ಶೆಡ್ ಮತ್ತು ಸಿಸಿ ರಸ್ತೆ ನಿರ್ಮಾಣ ಹಾಗೂ ಸರ್ಕಾರಿ ಕಾಲೇಜಿನಲ್ಲಿ ನಿರ್ಮಿಸಿದ ಪಿಂಕ್ ಶೌಚಾಲಯ ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿ ಗುಣಮಟ್ಟ ಅವಲೋಕಿಸಿದರು.

ಮಾರನಬಸರಿ ಗ್ರಾ.ಪಂ ವ್ಯಾಪ್ತಿಯಲ್ಲಿ ಗ್ರಾಮದಲ್ಲಿ ನಿರ್ಮಿಸಲಾದ ನೂತನ ಗ್ರಂಥಾಲಯ ಕಟ್ಟಡಕ್ಕೆ ಭೇಟಿ ನೀಡಿದರು. ಈ ವೇಳೆ ಗ್ರಂಥಾಲಯದ ಪುಸ್ತಕಗಳ ಸಂಗ್ರಹ ಕೋಣೆ, ಪಿಠೋಪಕರಣಗಳ ಗುಣಮಟ್ಟ, ಗ್ರಂಥಾಲಯದಲ್ಲಿ ತಂತ್ರಜ್ಞಾನ ಅಳವಡಿಕೆ ಕಾರ್ಯ ಸೇರಿದಂತೆ ಹಲವು ಮಾಹಿತಿಯನ್ನು ಗ್ರಂಥಪಾಲಕರಿಂದ ಪಡೆದುಕೊಂಡರು. ಬಳಿಕ ಗ್ರಾಮದ ಮೊಹರಂ ರಸ್ತೆ ಅಭಿವೃದ್ಧಿ, ಗ್ರಾಮದ ಹೊರವಲಯದಲ್ಲಿ ನಿರ್ಮಾಣವಾಗುತ್ತಿರುವ ನೂತನ ಶಾಲಾ ಕಟ್ಟಡವನ್ನು ಪರಿಶೀಲಿಸಿದರು.

ಬಳಿಕ ವಸತಿ ನಿಯಲದ ಕಟ್ಟಡ ಪರಿಶೀಲಿಸಿ ವಿದ್ಯಾರ್ಥಿಗಳಿಗೆ ಶಿಕ್ಷಕರು ಗುಣಮಟ್ಟದ ಶಿಕ್ಷಣ ನೀಡುತ್ತಿದ್ದಾರೆಯೇ ಎಂದು ತಿಳಿಯಲು ಸ್ವತಃ ವಿದ್ಯಾರ್ಥಿಗಳೊಂದಿಗೆ ಕ್ಲಾಸ್‌ನಲ್ಲಿ ಕುಳಿತು ಶಿಕ್ಷಕರ ಪಾಠ ಆಲಿಸಿದರು. ಬಳಿಕ ವಿದ್ಯಾರ್ಥಿಗಳೊಂದಿಗೆ ಉಪಹಾರ ಸವಿದು ವಸತಿ ನಿಲಯದ ಆಹಾರ ಗುಣಮಟ್ಟ ಮತ್ತು ವಸತಿ ನಿಲಯದ ಕಟ್ಟಡ ಪರಿಶೀಲಿಸಿದರು. ಬಳಿಕ ತಾಲೂಕಿನ ಶಿಕ್ಷಕರಿಗೆ ಜಿಲ್ಲೆಯ ಫಲಿತಾಂಶ ಹೆಚ್ಚಿಸಲ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಗಜೇಂದ್ರಗಡ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಂಜುಳಾ ಹಕಾರಿ, ಸಹಾಯಕ ನಿರ್ದೇಶಕ ಬಸವರಾಜ ಬಡಿಗೇರ, ಕ್ಷೇತ್ರ ಶಿಕ್ಷಣಾಧಿಕಾರಿ ಫಣಿಬಂದ, ಅಕ್ಷರ ದಾಸೋಹ ಇಲಾಖೆಯ ಸಹಾಯಕ ನಿರ್ದೇಶಕರು, ತಾಲೂಕಿನ ನರೇಗಾ ಸಿಬ್ಬಂದಿ ವರ್ಗ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳು ಹಾಜರಿದ್ದರು.

**ಗದಗ ಜೇಂಟ್ಸ್ ಗ್ರುಪ್ ಆಫ್ ಸಖೀಸಹೇಲಿ ಸಂಘದಿಂದ ವೈದ್ಯ ದಿನಾಚರಣೆ**

## ವೈದ್ಯರು ನಮ್ಮೆಲ್ಲರ ಪಾಲಿನ ದೇವರು



**■ವಿಜಯಸಾಕ್ಷಿ ಸುದ್ದಿ, ಗದಗ**

ಮನುಷ್ಯನಿಗೆ ಆರೋಗ್ಯವೇ ಭಾಗ್ಯ ಎಂಬುದು ಸತ್ಯವಾದುದು. ಆರೋಗ್ಯವು ಅನಾರೋಗ್ಯವಾದಾಗ ಔಷಧ ನೀಡಿ ಗುಣಪಡಿಸುವದು ವೈದ್ಯ ವೃತ್ತಿಧರ್ಮ ಎಂದು ಗದಗ ಜೇಂಟ್ಸ್ ಗ್ರುಪ್ ಆಫ್ ಸಖೀಸಹೇಲಿ ಸಂಘದ ಅಧ್ಯಕ್ಷೆ ಸುಮಾ ಪಾಟೀಲ ಹೇಳಿದರು.

ಅವರು ಗದುಗಿನ ಖ್ಯಾತ ಚಿಕ್ಕಮಕ್ಕಳ ತಜ್ಞರಾದ ಡಾ. ಎಸ್. ಎಫ್. ವರವಿ ಅವರನ್ನು 'ವೈದ್ಯ ದಿನಾಚರಣೆ' ಪ್ರಯುಕ್ತ ಸನ್ಮಾನಿಸಿ ಮಾತನಾಡಿದರು.

ನೋವಿನ ಸಂದರ್ಭದಲ್ಲಿ ಸೂಕ್ತ ಚಿಕಿತ್ಸೆ ನೀಡಿ ಪುನರ್ಜನ್ಮ ನೀಡುವ ವೈದ್ಯರು ನಮ್ಮೆಲ್ಲರ ಪಾಲಿನ ದೇವರು. ಇವರಿಗೆ ವಿಶೇಷ ಗೌರವ ನೀಡುವ ಮೂಲಕ ವೈದ್ಯರ ದಿನಾಚರಣೆ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ನಮ್ಮ ಉತ್ತಮ ಹಾಗೂ ಆರೋಗ್ಯಕರ ಬದುಕಿಗಾಗಿ ಸಮರ್ಪಣಾ ಮನೋಭಾವದಲ್ಲಿ ಕಳೆದ 40 ವರ್ಷಗಳಿಂದ ವೈದ್ಯಕೀಯ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸುತ್ತಿರುವ ಡಾ. ವರವಿ ಅವರ ಸೇವೆ ಅಭಿನಂದನೀಯ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ನಿರ್ಮಲಾ ಪಾಟೀಲ, ವೈದ್ಯರು ಭೂಮಿಯ ಮೇಲಿರುವ ದೇವರು ಎನ್ನುವ ನಂಬಿಕೆ ನಮ್ಮಲ್ಲಿದೆ. ನಿಸ್ವಾರ್ಥ ಸೇವೆಯನ್ನೇ ಗುರಿಯಾಗಿಸಿಕೊಂಡು ನಿರಂತರ ಸೇವೆಗೈಯುತ್ತಿರುವ ವೈದ್ಯರು ರೋಗಿಗಳ ಬದುಕಿನ ಆಶಾಕಿರಣ ಎಂದು ಬಣ್ಣಿಸಿದರು. ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ. ವರವಿ, ವೈದ್ಯಕೀಯ ಕ್ಷೇತ್ರದಲ್ಲಿ ಹಗಲಿರುಳು ಸೇವೆ ಸಲ್ಲಿಸಿ ನೋವು ಎಂದು ಬಂದವರ ಮುಖದಲ್ಲಿ ನಗು ತರಿಸುವ ಕಾರ್ಯ ನಿರಂತರ ನಡೆಯುತ್ತಿದೆ. ನೋವು ಕಡಿಮೆ ಆದಾಗ ನಮ್ಮೊಂದಿಗೆ ರೋಗಿಗಳು ಸಂತಸ ಹಂಚಿಕೊಂಡು ಆರೋಗ್ಯವಂತರಾಗಿ ನಡೆದಾಗ ನಮ್ಮ ವೃತ್ತಿ ಘನತೆ ಹೆಚ್ಚುತ್ತದೆ ಎಂದರು.

ಮಾಧುರಿ ಮಾಳೇಕೊಪ್ಪ ಹಾಗೂ ಶಶಿಕಲಾ ಮಾಲೀಪಾಟೀಲ ಪ್ರಾರ್ಥಿಸಿದರು. ಪ್ರಿಯಾಂಕಾ ಹಳ್ಳಿ ಸ್ವಾಗತಿಸಿದರು. ಆಶಾ ಪಟ್ಟಣಶೆಟ್ಟಿ ಪರಿಚಯಿಸಿದರು. ಅಶ್ವಿನಿ ಮಾದಗುಂಡಿ ನಿರೂಪಿಸಿದರು. ಚಂದ್ರಕಲಾ ಸ್ಥಾವರಮಠ ವಂದಿಸಿದರು.

ಕಾರ್ಯಕ್ರಮದಲ್ಲಿ ರೇಖಾ ರೊಟ್ಟಿ, ಅನ್ನಪೂರ್ಣ ವರವಿ, ಶಾಂತಾ ಮುಂದಿನಮನಿ, ಲಕ್ಷ್ಮೀ ಕಟ್ಟೇಣ್ಣವರ, ಯಲ್ಲಮ್ಮ ಬೇಲೇರಿ, ಗೀತಾ ಮಠದ, ನಿವೇದಿತಾ ಅಡ್ನೂರ, ವಿಜಯಲಕ್ಷ್ಮೀ ಬಾರಿಕಾಯಿ, ಹೇಮಾ ಬಿ, ಜಯಶ್ರೀ ಕುರುಬರ ಮುಂತಾದವರಿದ್ದರು.

## ಉಭಯ ಶ್ರೀಗಳ ಕನಸು ಕಲ್ಲಯ್ಯಜ್ಜನವರಿಂದ ಸಾಕಾರ

**■ವಿಜಯಸಾಕ್ಷಿ ಸುದ್ದಿ, ಗದಗ**

ಲಿಂ. ಪಂ. ಪಂಚಾಕ್ಷರಿ ಗವಾಯಿಗಳವರ ಹಾಗೂ ಲಿಂ. ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ ಮಾರ್ಗದರ್ಶದಲ್ಲಿ ಪೂಜ್ಯಶ್ರೀ ಕಲ್ಲಯ್ಯಜ್ಜನವರು ವಿರೇಶ್ವರ ಪುಣ್ಯಾಶ್ರಮವನ್ನು ಮುನ್ನಡೆಸಿಕೊಂಡು ಹೋಗುತ್ತ ಉಭಯ ಗುರುಗಳ ಕನಸನ್ನು ಸಾಕಾರಗೊಳಿಸಿದ್ದಾರೆ ಎಂದು ಕಪೋತಗಿರಿ ನಂದಿವೇರಿ ಶ್ರೀಮಠದ ಪೂಜ್ಯಶ್ರೀ ಶಿವಕುಮಾರ ಶ್ರೀಗಳು ಹೇಳಿದರು.


ಅವರು ನಗರದ ವಿರೇಶ್ವರ ಪುಣ್ಯಾಶ್ರಮದಲ್ಲಿ ಪೂಜ್ಯಶ್ರೀ ಕಲ್ಲಯ್ಯಜ್ಜನವರ 55ನೇ ಜನ್ಮದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ತುಲಾಭಾರ ಸೇವೆ ನೆರವೇರಿಸಿ ಮಾತನಾಡಿದರು.

ಪೂಜ್ಯಶ್ರೀ ಕಲ್ಲಯ್ಯಜ್ಜನವರ ನೇತೃತ್ವದಲ್ಲಿ ಪುಣ್ಯಾಶ್ರಮವು ಉತ್ತರೋತ್ತರವಾಗಿ ಅಭಿವೃದ್ಧಿಗೊಳ್ಳಲಿ. ಹಾನಗಲ್ ಶ್ರೀಗುರು ಕುಮಾರೇಶ್ವರರ, ಪಂ. ಪಂಚಾಕ್ಷರ ಗವಾಯಿಗಳವರ ಹಾಗೂ ಪಂ. ಪುಟ್ಟರಾಜ ಗವಾಯಿಗಳವರ ಶ್ರೀರಕ್ಷೆ ಕಲ್ಲಯ್ಯಜ್ಜನವರ ಮೇಲೆ ಸದಾ ಇರಲಿದೆ ಎಂದು ಶುಭ ಹಾರೈಸಿದರು.

ಲಿಂಗಸೂರಿನ ಮಾಣಿಕೇಶ್ವರಿ ಅಶ್ರಮದ ಪೂಜ್ಯಶ್ರೀ ಶಿವಶರಣೆ ನಂದೀಶ್ವರಿ ಅಮ್ಮನವರು ಪೂಜ್ಯಶ್ರೀ ಕಲ್ಲಯ್ಯಜ್ಜನವರ ತುಲಾಭಾರ ಸೇವೆಯನ್ನು ನೆರವೇರಿಸಿದರು.

ಇದೇ ಸಂದರ್ಭದಲ್ಲಿ ನಂದಿಶ್ವರಿ ಅಮ್ಮನವರಿಗೆ 'ನಡೆದಾಡುವ ನಕ್ಷತ್ರ' ಎಂಬ ಬಿರುದು ನೀಡಿ ಶ್ರೀಮಠದಿಂದ ಗೌರವಿಸಲಾಯಿತು.

ವೇದಿಕೆ ಮೇಲೆ ಶ್ರೀ ವೀರೇಶ್ವರ ಪುಣ್ಯಾಶ್ರಮ ಗದಗ-ದಾವಣಗೆರೆ ಸೋಲ್‌ಟ್ರಸ್ಟ್‌ನ ಸದಸ್ಯರಾದ ಪಿ.ಎಫ್. ಕಟ್ಟಿಮನಿ, ಪಿ.ಸಿ. ಹಿರೇಮಠ, ಸಾರಿಗೆ ನಿಗಮದ ಉಪಾಧ್ಯಕ್ಷ ಪೀರಸಾಬ ಕೌತಾಳ, ಜೋಹರಾ ಕೌತಾಳ, ಜೇವರ್ಗಿಯ ನಾಡಗೌಡ ಅಪ್ಪಾಸಾಬ ಪಾಟೀಲ, ವೀರೇಶ್ವರ ಪುಣ್ಯಾಶ್ರಮದ ವ್ಯವಸ್ಥಾಪಕರಾದ ಹೇಮರಾಜಶಾಸ್ತ್ರಿ ಹಿರೇಮಠ ಹೆಡಿಗ್ಗೊಂಡ ಮುಂತಾದವರು ಉಪಸ್ಥಿತರಿದ್ದರು.





ಕರ್ನಾಟಕ ರಾಜ್ಯ ಮಾಧ್ಯಮಿಕ ನೌಕರರ ಸಂಘದ ಗದಗ ಜಿಲ್ಲಾಧ್ಯಕ್ಷ ಹಾಗೂ ಶಿರಹಟ್ಟಿ ತಾಲೂಕಿನ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಂ.ಕೆ. ಲಮಾಣಿ ಅವರನ್ನು ಹಿರಿಯ ರಾಜಕಾರಣಿ ಡಿ.ಆರ್. ಪಾಟೀಲ್ ಸನ್ಮಾನಿಸಿ ಗೌರವಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾಧ್ಯಕ್ಷ ಕೆ.ಎ. ಬಳಿಗೇರ, ಸುಧಾ ಹುಚ್ಚಣ್ಣನವರ್, ಹಿರಿಯ ಸಾಹಿತಿ ಜೆ.ಕೆ. ಜಮಾದಾರ್, ಜಿಲ್ಲಾ ಕಾರ್ಯದರ್ಶಿ ಬೂದಪ್ಪ ಅಂಗಡಿ ಮುಂತಾದವರಿದ್ದರು.

## ಬಿಎಲ್‌ಓ ಕೆಲಸದಿಂದ ಬಿಡುಗಡೆಗೊಳಿಸಲು ಮನವಿ




**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಅಂಗನವಾಡಿ ಕಾರ್ಯಕರ್ತೆಯರು ತಮ್ಮನ್ನು ಬಿಎಲ್‌ಓ ಕೆಲಸದಿಂದ ಬಿಡುಗಡೆಗೊಳಿಸುವಂತೆ ತಹಸೀಲ್ದಾರರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕಾ ಅಂಗನವಾಡಿ ಕಾರ್ಯಕರ್ತೆಯರ ಸಂಘದ ಅಧ್ಯಕ್ಷೆ ಎ.ಎನ್. ನಾಯಕ, ಉಪಾಧ್ಯಕ್ಷೆ ವ್ಹಿ.ಬಿ. ಗದಗ, ಶಿರಹಟ್ಟಿ-ಲಕ್ಷ್ಮೇಶ್ವರ ತಾಲೂಕುಗಳಲ್ಲಿಯ ಅಂಗನವಾಡಿ ಕಾರ್ಯಕರ್ತೆಯರನ್ನು ಬಿಎಲ್‌ಓ ಕೆಲಸದಿಂದ ಬಿಡುಗಡೆ ಮಾಡಲು ಹಲವಾರು ಬಾರಿ ವಿನಂತಿಸಿದ್ದರೂ ಕ್ರಮವಹಿಸಿಲ್ಲ. ನಮ್ಮ ಇಲಾಖೆಯ ಹೆಚ್ಚಿನ ಕೆಲಸಗಳನ್ನು ಮೊಬೈಲ್ ಮೂಲಕವೇ ಮಾಡುತ್ತಿರುವದರಿಂದ ನಮಗೆ ಸಮಸ್ಯೆಯಾಗುತ್ತಿದೆ. ಆದ್ದರಿಂದ ನಮ್ಮನ್ನು ಬಿಎಲ್‌ಓ ಕೆಲಸದಿಂದ ಬಿಡುಗಡೆ ಮಾಡಬೇಕೆಂದು ವಿನಂತಿಸಿದರು.

ಈ ಸಂದರ್ಭದಲ್ಲಿ ಎಸ್.ಸಿ. ಕಿತ್ತೂರ, ಎಂ.ಎ. ಕಾಂಬಳೆ, ಎಂ.ಎಸ್. ಕಾಳಿ, ಆರ್.ಬಿ. ಮಣ್ಣೂರ, ಎಸ್.ಬಿ. ಬಣಗಾರ, ಎಸ್.ಬಿ. ಪಲ್ಲೇದ, ಎಸ್.ಎಸ್. ಮಣ್ಣೂರ, ಆರ್.ಎಸ್. ವಡವಿ, ಜಿ.ಡಿ. ಪತ್ರದ, ಕೆ.ಎನ್. ಬಡಿಗೇರ, ಎಸ್.ಎಫ್. ಮೊರಬದ, ಎಂ.ಎಚ್. ಹರಿಜನ, ಪಿ.ಎಂ. ಹೊಸಮನಿ, ಜಯಲಕ್ಷ್ಮೀ ಥೋರಾತ, ವಿನೋದಾ ಭಾವನೂರ, ಸುಧಾ ಹೇಮಗಿರಿಮಠ, ಎಂ.ಆರ್. ವಾರದ, ಸ್ನೇಹಾ ಅಂದಾನಪ್ಪನವರ, ಜೆ.ಸಿ. ತೇ-ೂೕಟದ, ಜಿ.ಪಿ. ಕೆಂಪಣ್ಣನವರ, ಡಿ.ಕೆ. ಸನದಿ, ಎಸ್.ಎಸ್. ಚಿಲಕವಾಡ ಮುಂತಾದವರು ಉಪಸ್ಥಿತರಿದ್ದರು.

## 'ಕಾಲಿಗೆ ಗಾಲಿ ಕಟ್ಟಿಕೊಂಡು' ಪುಸ್ತಕ ಬಿಡುಗಡೆ ನಾಳೆ




**■ವಿಜಯಸಾಕ್ಷಿ ಸುದ್ದಿ, ಗದಗ**

ನಿವೃತ್ತ ಉಪನ್ಯಾಸಕ, ಹಿರಿಯ ಸಾಹಿತಿ ರಾಜೂರ(ಗಜೇಂದ್ರಗಡ)ದ ಡಾ. ಮಲ್ಲಿಕಾರ್ಜುನ ಕುಂಬಾರ ಅವರ 'ಕಾಲಿಗೆ ಗಾಲಿ ಕಟ್ಟಿಕೊಂಡು' ಪ್ರವಾಸ ಕಥನಗಳ ಪುಸ್ತಕ ಜು. 6ರಂದು ಮುಂಜಾನೆ 10.30 ಗಂಟೆಗೆ ನಗರದ ಗದಗ ರೆಸ್ಟೋರೆಂಟ್ ಸಭಾಂಗಣದಲ್ಲಿ ಗೆಳೆಯರ ಬಳಗದಿಂದ ಬಿಡುಗಡೆಗೊಳ್ಳಲಿದೆ.

ಗದಗ-ಬೆಟಗೇರಿ ನಗರಸಭೆಯ ಪೌರಾಯುಕ್ತ ರಾಜಾರಾಮ ಪವಾರ ಪುಸ್ತಕ ಬಿಡುಗಡೆ ಮಾಡುವರು. ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ಮುಖ್ಯ ಅತಿಥಿಗಳಾಗಿ ಸಾಂಸ್ಕೃತಿಕ ಚಿಂತಕರಾದ ಶಿವನಗೌಡ ಗೌಡರ, ಶಶಿಧರ ಮಂಗಳೂರ ಹಾಗೂ ಸಾಹಿತಿ ಐ.ಕೆ. ಕಮ್ಮಾರ ಆಗಮಿಸುವರು. ಗ್ರಂಥಕರ್ತರಾದ ಡಾ. ಮಲ್ಲಿಕಾರ್ಜುನ ಕುಂಬಾರ ಉಪಸ್ಥಿತರಿರುವರು ಎಂದು ಗೆಳೆಯರ ಬಳಗದ ಪ್ರಕಟಣೆ ತಿಳಿಸಿದೆ.

## ದರವಾರು ಪಟ್ಟಿಗಳ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಸ್ವಚ್ಛ ಭಾರತ ಮಿಷನ್ (ನಗರ)-2.0 ಯೋಜನೆಯಡಿ ಮಾಹಿತಿ ಶಿಕ್ಷಣ ಸಂವಹನ ಮತ್ತು ಸಾಮರ್ಥ್ಯಾಭಿವೃದ್ಧಿ ಘಟಕಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ದರವಾರು ಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತರು ಪಟ್ಟಣ ಪಂಚಾಯತಿಗೆ ರೂ.500/- ಪ್ರತಿ ಕಾರ್ಯಕ್ರಮಕ್ಕೆ ಅರ್ಜಿ ಫಾರ್ಮ ಫೀ ಪಡೆದು ದರವಾರು ಸಲ್ಲಿಸಲು ಅರ್ಜಿಯನ್ನು ನಮೂದಿಸಿ ಶಿಲ್‌ಬಂಧ ಲಕೋಟಿಯನ್ನು ಮುಖ್ಯಾಧಿಕಾರಿ ಪಟ್ಟಣ ಪಂಚಾಯತ ಮುಳಗುಂದ ಈ ವಿಳಾಸಕ್ಕೆ ಕಚೇರಿಯ ಅವಧಿಯಲ್ಲಿ ಜುಲೈ 11 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮುಳಗುಂದ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

**ಕರ್ನಾಟಕ ಸರಕಾರ (ಜಿಲ್ಲಾ ಪಂಚಾಯತ್, ಗದಗ)**

**ಕಾರ್ಯನಿರ್ವಾಹಕ ಇಂಜನೀಯರ,**
**ಪಂಚಾಯತ್ ರಾಜ್ ಇಂಜನೀಯರಿಂಗ್ ವಿಭಾಗ, ಗದಗ.**

ನಂ:ಪಂ.ರಾಜ್.ಇಂ.ವಿ/ಗದಗ/ಪಿಬಿ.3/ಟೆಂಡರ/2025-26/1105

ದಿನಾಂಕ : 03-07-2025

**ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ**
**Standard Bid Document KW-1, 2 & KG-1**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ Standard Bid Document KW-1, 2 & KG-1 ರ ನಿಯಮಗಳನ್ವಯ ಅರ್ಹ ಗುತ್ತೇದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ 22 ಕಾಮಗಾರಿಗಳ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ : 2024-25 ನೇ ಸಾಲಿನ ಕೇಂದ್ರ ಯೋಜನೆ ಅಡಿಯಲ್ಲಿ ಪಿ.ಎ.ಬಿ ವಾರ್ಷಿಕ ಕ್ರೀಯಾ ಯೋಜನೆ (ಎ.ಡಬ್ಯೂ.ಬಿ&ಬಿ) ಮೇಜರ ದುರಸ್ಥಿ, 2025-26 ನೇ ಸಾಲಿನ MGNREGA ಒಗ್ಗೂಡುವಿಕೆ ಯೋಜನೆ, 2024-25 ನೇ ಸಾಲಿನ ಮಳೆ ಪರಿಹಾರ ಕಾರ್ಯಕ್ರಮದ 5054 ಯೋಜನೆಯಡಿ, ಟೆಂಡರನ್ನು ಆಹ್ವಾನಿಸಲಾಗಿದೆ. ಪಿ.ಡಬ್ಲು.ಡಿ. ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, (https://kppp.karnataka.gov.in) ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆ ಈ ಕೆಳಗಿನಂತೆ ಇರುತ್ತವೆ.

**Indent Nos** : 1) WORK_INDENT : 15958, 16147, 15968, 15969, 16055, 16364, 16366, 16367, 16368, 16703, 16702, 16707, 16704, 16793, 16706, 10257, 10270, 10272, 10274, 10275, 10276, 10283

ಟೆಂಡರಿಗಿಟ್ಟ ಕನಿಷ್ಠ ಮೊತ್ತ ರೂ. **7.65** ಲಕ್ಷ ಮತ್ತು ಗರಿಷ್ಠ ಮೊತ್ತ ರೂ. **42.60** ಲಕ್ಷಗಳು ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ :- ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಇ.ಎಂ.ಡಿ. ಸಂಬಂಧಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯೂರಮೆಂಟ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ : **04-07-2025** ರಿಂದ **19-07-2025** ರಂದು 16.00 ಗಂಟೆಯವರೆಗೆ. ಟೆಂಡರ ತೆರೆಯುವ ದಿನಾಂಕ : **21-07-2025** ರಂದು 16.30 ಗಂಟೆಗೆ ತೆರೆಯಲಾಗುವುದು. ಟೆಂಡರನ್ನು ಅನಾವರಣಗೊಳಿಸಿದ ದಿನಾಂಕದಿಂದ ಭಾಗವಹಿಸಿದ ಗುತ್ತಿಗೆದಾರರಲ್ಲಿ ಆರ್ಥಿಕ ಬಿಡ್‌ದಲ್ಲಿ ಅರ್ಹ ಗುತ್ತಿಗೆದಾರರು ಈ ಕಾರ್ಯಾಲಯಕ್ಕೆ ಹಾಜರಾಗಿ ವ್ಯತ್ಯಾಸದ ಮೊತ್ತ ಹಾಗೂ ಪಿ.ಎಸ್.ಡಿ. ಮೊತ್ತವನ್ನು ಎಫ್.ಡಿ.ಆರ್ ರೂಪದಲ್ಲಿ 20 ದಿನಗಳ ಒಳಗಾಗಿ (ಷರತ್ತು ಕ್ರ.ಸಂ :13 ರಂತೆ) ಭರಣಾ ಮಾಡಬೇಕು. ಇ-ಪದ್ದತಿ ಇರುವುದರಿಂದ ಕಾಗದ ರಹಿತವಾಗಿದ್ದು ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

**ಸಹಿ/- ಕಾರ್ಯನಿರ್ವಾಹಕ ಇಂಜನೀಯರರು,**
**ಪಂ.ರಾಜ್. ಇಂಜನೀಯರಿಂಗ್ ವಿಭಾಗ,**
**ಗದಗ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/153/2025-26

## ಡಾ. ಬಳ್ಳಾರಿ ಅಮ್ಮ ಫೌಂಡೇಷನ್ ಬೆನ್ನೆಲುಬು




**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಗದಗ ಘಟಕದ ಜಿಲ್ಲಾಧ್ಯಕ್ಷರಾಗಿ ರವಿ ಎಲ್. ಗುಂಜಿಕರ ಸತತ ಮೂರು ಅವಧಿಗೆ ಅವಿರೋಧವಾಗಿ ಆಯ್ಕೆಯಾಗಿದ್ದರು. ಅವರ ಸೇವಾ ನಿವೃತ್ತಿಯಿಂದ ತೆರವಾಗಿದ್ದ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಗುರುವಾರ ಸರಕಾರಿ ನೌಕರರ ಭವನದಲ್ಲಿ ಚುನಾವಣೆ ನಡೆದು, ಡಾ. ಬಸವರಾಜ ಬಳ್ಳಾರಿ 55 ಮತಗಳನ್ನು ಪಡೆಯುವ ಮೂಲಕ ವಿಜಯಶಾಲಿಯಾಗಿರುವುದಕ್ಕೆ ಬೆಂಗಳೂರಿನ ಅಮ್ಮ ಫೌಂಡೇಷನ್ ಅಧ್ಯಕ್ಷರು ಹಾಗೂ ಸದಸ್ಯರು ಹರ್ಷ ವ್ಯಕ್ತಪಡಿಸಿದರು.

ಡಾ. ಬಸವರಾಜ ಬಳ್ಳಾರಿ ಅವರು ಮೊದಲು ವಸತಿ ನಿಲಯದ ನಿಲಯಪಾಲಕರಾಗಿ ಕಾರ್ಯ ನಿರ್ವಹಿಸಿ, ಸದ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಗದಗ ತಾಲೂಕು ಅಧಿಕಾರಿಗಳಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ನಮ್ಮ ಅಮ್ಮ ಫೌಂಡೇಷನ್ ಮಾರ್ಗದರ್ಶಕರೂ ಆಗಿ ಫೌಂಡೇಷನ್ ವತಿಯಿಂದ ಹಲವಾರು ಸಾಮಾಜಿಕ, ಶೈಕ್ಷಣಿಕ ಕಾರ್ಯಗಳನ್ನು ಮಾಡುವುದಕ್ಕೆ ಮಾರ್ಗದರ್ಶನ ನೀಡುತ್ತ ನಮ್ಮ ಬೆನ್ನೆಲುಬಾಗಿ ನಿಂತಿದ್ದಾರೆ ಎಂದರು.

ಅಮ್ಮ ಫೌಂಡೇಷನ್ ಅಧ್ಯಕ್ಷರು ಹಾಗೂ ವಕೀಲರಾದ ಮೈಲಾರಪ್ಪ ಡಿ.ಎಚ್ ಮಾತನಾಡಿ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿ ಅವರು ನೌಕರರ ಕ್ಷೇಮಾಭಿವೃದ್ಧಿ ಜೊತೆಗೆ ಜನಸಾಮಾನ್ಯರ ಸಮಸ್ಯೆಗಳಿಗೆ ತಮ್ಮ ಹಂತದಲ್ಲಿ ಶ್ರಮಿಸಿ ಮಾದರಿ ಅಧ್ಯಕ್ಷರಾಗುವಲ್ಲಿ ಸಂದೇಹವಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯದರ್ಶಿ ವಿಶ್ವನಾಥ ದಲಾಲಿ ಮಾತನಾಡಿ, ನಮ್ಮ ಅಮ್ಮ ಫೌಂಡೇಷನ್ ವತಿಯಿಂದ ಬಡ ಮಕ್ಕಳಿಗಾಗಿ ಪುಸ್ತಕಗಳು, ಅವಶ್ಯ ಸಾಮಗ್ರಿಗಳನ್ನು ಒದಗಿಸುವುದು, ಆರೋಗ್ಯ ಶಿಬಿರ, ಪರಿಸರ ಸಂರಕ್ಷಣೆಯ ಕಾರ್ಯಕ್ಕೆ ಅಮ್ಮ ಫೌಂಡೇಷನ್ ಮಾರ್ಗದರ್ಶಕರಾದ ಬಳ್ಳಾರಿ ಅವರು ಸದಾ ಸಹಕಾರ ನೀಡುತ್ತಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಖಜಾಂಚಿ ಮಾರುತಿ ಜಿ.ಎಚ್, ಸಂಘಟನಾ ಕಾರ್ಯದರ್ಶಿ ಸುರೇಶ ಹಾಳಕೇರಿ, ಸಾಂಸ್ಕೃತಿಕ ಕಾರ್ಯದರ್ಶಿ ಪರಶುರಾಮ ತಳವಾರ, ಅಣ್ಣಪ್ಪ ಗುತ್ತೆಮ್ಮನವರ, ಕಿರಣ, ಶಿವು ದೊಡ್ಡಮನಿ ಇತರರು ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka